MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 224 | ಶುಕ್ರವಾರ : 20-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 224 | FRIDAY : 20-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## 108 ಆಂಬ್ಯುಲೆನ್ಸ್ ಡ್ರೈವರ್ ಸಸ್ಪೆಂಡ್

**ಯುವ ಮಾರ್ಗ ಸುದ್ದಿ**


108 ತುರ್ತು ವಾಹನ ಚಾಲಕ ಆನಂದಯ್ಯ ಆಟಾಟೋಪ, ಬಡವರಿಗೆ ಸಿಗದ ಸೇವೆ
ಸರ್ಕಾರಿ ಕೆಲಸಕ್ಕೆ ಹಾಜರಿ, ಖಾಸಗಿ ದುಡಿಮೆ




**ಲಿಂಗಸುಗೂರು,ಜೂ.19–** ವಿಚಾರಣೆಯನ್ನು ಕಾಯ್ದಿರಿಸಿ ಮುಂದಿನ ಆದೇಶದ ವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ 108 ಆಂಬ್ಯುಲೆನ್ಸ್ ಡ್ರೈವರ್ ಆನಂದಯ್ಯ ರನ್ನು ಸಸ್ಪೆಂಡ್ ಮಾಡಲಾಗಿದೆ.

ಸರ್ಕಾರಿ ಆಂಬ್ಯುಲೆನ್ಸ್‌ಬಿಟ್ಟು ಕರ್ತವ್ಯ ವೇಳೆ ಖಾಸಗಿ ಆಂಬ್ಯುಲೆನ್ಸ್ ನಡೆಸುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಜಿವಿಕೆ ಎಮರಿ ಸಂಸ್ಥೆಯ ಸೇವಾ ನಿಯಮಗಳನ್ನು ಉಲ್ಲಂಘಿಸಿರು ವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಈ ಹಿನ್ನೆಲೆಯಲ್ಲಿ ವಿಚಾರಣೆಯನ್ನು ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಕರ್ತವ್ಯದಿಂದ ಅಮಾನತು ಗೊಳಿಸಲಾಗಿದೆ. ಮತ್ತು ಬೆಂಗಳೂರಿನ




ಕೇಂದ್ರ ಕಚೇರಿಯಲ್ಲಿ ವಿಚಾರಣೆಗೆ ಹಾಜರಾಗಲು ಎಮರಿ ಹಸಿರು ಆರೋಗ್ಯ ಸೇವೆ ಸಂಸ್ಥೆ ಪತ್ರ ರವಾನಿಸಿದೆ.

108 ತುರ್ತು ವಾಹನ ಚಾಲಕ ಆನಂದ ಯ್ಯ ಆಟೋಟೊಪ, ಬಡವರಿಗೆ ಸಿಗದ ಸೇವೆ..**ಸರ್ಕಾರಿ ಕೆಲಸಕ್ಕೆ ಹಾಜರಿ, ಖಾಸಗಿ ದುಡಿಮೆ!"** ಶೀರ್ಷಿಕೆಯಡಿ ಯುವ ಮಾರ್ಗ ಪತ್ರಿಕೆ ಜೂ.18 ರ ಸಂಚಿಕೆಯಲ್ಲಿ ಸವಿಸ್ತಾರ ವರದಿ ಪ್ರಕಟಿಸಿತ್ತು.


EMRI GREEN HEALTH SERVICES

Date: 16-06-2025

Mr. ANANDAYYA
Emp. ID: 038803
Design: PILOT
EM Operations

Dear Anandayya,

Suspension Pending enquiry:
Ref:1 Compliant on working in private ambulance

It is reported against you that you are working in a private ambulance, which is captured in a video, and a complaint was given on 16-06-2025.

The above act of yours is a MAJOR MISCONDUCT where in you have violated code of Conduct, under service rules which reads as follows:

Violation of GVK EMRI Service rules states as:
CHAPTER-II – CODE OF CONDUCT (59. CONFLICT OF INTERESTS)

The Employees on the rolls of EMRI GHS shall not be allowed to take up either directly or indirectly any part time or full time employment / assignment elsewhere or do practice or vocation or business during their services with EMRI GHS . Employees shall respect & abide by the Conflict of interest policy of EMRI GHS
However you are suspended from duty with immediate effect and pending enquiry and you are advised to attend enquiry at HO Bangalore

For EMRI Green Health Services

Authorized Signatory

EMRI Green Health Services
108 EMERGENCY

ಅಮಾನತು ಮಾಡಿರುವ ಆದೇಶ ಪ್ರತಿ

## ಜನತೆಯ ಜೊತೆ ಜನತಾದಳ ಕಾರ್ಯಕ್ರಮ
## ಜೂನ್ 27ಕ್ಕೆ ದೇವದುರ್ಗಕ್ಕೆ ಹೆಚ್.ಡಿ.ದೇವೇಗೌಡ ಆಗಮನ

**ಯುವ ಮಾರ್ಗ ಸುದ್ದಿ**



**ದೇವದುರ್ಗ,ಜೂ.19–** ಮಾಜಿ ಪ್ರಧಾನ ಮಂತ್ರಿ ಹೆಚ್.ಡಿ. ದೇವೇಗೌಡರು ಜೂನ್ 27ರಂದು ದೇವದುರ್ಗಕ್ಕೆ 'ಜನತೆಯ ಜೊತೆ ಜನತಾದಳ' ಕಾರ್ಯ ಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಸಿಂಧನೂರಿನ ಮಾಜಿ ಶಾಸಕ ವೆಂಕಟರಾ ವ್ ನಾಡಗೌಡ ತಿಳಿಸಿದ್ದಾರೆ.

ನಾಡಗೌಡ ಅವರು ಪಟ್ಟಣದ ಸರ್ಕಿಟ್ ಹೌಸ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಕಾರ್ಯವೈಖರಿಯ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. "ರಾಜ್ಯದ 'ಲ್ಲಿ ಕಾಂಗ್ರೆಸ್ ಸರ್ಕಾರ ಇದೆಯೇ ಎಂದು ಜನ ಕೇಳುವಂತಾಗಿದೆ. ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿ ಕುಂಠಿತವಾಗಿದ್ದು, ಕೆಲ ಕಾಂಗ್ರೆಸ್ ಶಾಸಕರು ತಾವು ಶಾಸಕರಾಗಿದ್ದಕ್ಕೆ ಪಶ್ಚಾತ್ತಾಪ ಪಡುವಂತಾಗಿದೆ" ಎಂದು ಅವರು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆ.ಕೆ.ಆರ್.ಡಿ.ಬಿ ಅಡಿಯಲ್ಲಿ ಪ್ರತಿ ಶಾಸಕರಿಗೆ ಸುಮಾರು 90 ರಿಂದ 95 ಕೋಟಿ ಅನುದಾನ ಬರುತ್ತಿದ್ದರೂ, ರಾಜ್ಯದಲ್ಲಿ ಆಡಳಿತದಲ್ಲಿರುವ ಕಾಂಗ್ರೆಸ್ ಸರ್ಕಾರದಿಂದ ಅಭಿವೃದ್ಧಿ ಕಾಣಲು ಸಾಧ್ಯವಿಲ್ಲ ಎಂದು ನಾಡಗೌಡ ಅಭಿಪ್ರಾಯಪಟ್ಟರು. ಅಲ್ಲದೆ, ಕಾಂಗ್ರೆಸ್ ಸರ್ಕಾರ ಜಿ.ಪಂ. ಮತ್ತು ತಾ.ಪಂ. ಚುನಾವಣೆಗಳನ್ನು ನಡೆಸಲು ಮುಂದಾಗುತ್ತಿಲ್ಲ ಎಂದು ಆರೋಪಿಸಿದರು.

**ಜೆಡಿಎಸ್–ಬಿಜೆಪಿ ಮೈತ್ರಿ ಮುಂದುವರಿಕೆ:** ಯಾವುದೇ ಚುನಾವಣೆಗಳು ಬಂದರೂ ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳ ಮೈತ್ರಿ ಮುಂದುವರೆಯಲಿದೆ ಎಂದು ನಾಡಗೌಡ ಸ್ಪಷ್ಟಪಡಿಸಿದರು. ಪ್ರತಿ ಜಿಲ್ಲೆಯಲ್ಲಿ ಕೋರ್ ಕಮಿಟಿ ಇದ್ದು, ಚುನಾವಣೆ ವೇಳೆ ಸ್ಥಾನ ಹೊಂದಾಣಿಕೆ ಮಾಡಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

**ದೇವೇಗೌಡರ ಕೊಡುಗೆ ಸ್ಮರಣೆ:** ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡರು ನಮ್ಮ ಭಾಗದಲ್ಲಿ ನೀರಾವರಿ ಯೋಜನೆಗಳಿಗೆ ಚಾಲನೆ ನೀಡಿದ್ದರಿಂದ ಈ ಭಾಗದ ಜನರು ಆರ್ಥಿಕವಾಗಿ ಅಭಿವೃದ್ಧಿ ಹೊಂದಿದ್ದಾರೆ ಎಂದು ನಾಡಗೌಡ ಸ್ಮರಿಸಿದರು. ದೇವೇಗೌಡರ ಮೇಲಿನ ಅಭಿಮಾನದಿಂದ ಈಗಾಗಲೇ ಜಾಲಹಳ್ಳಿ ಹೋಬಳಿಯಲ್ಲಿ ಅವರ ಮೂರ್ತಿ ಸ್ಥಾಪನೆಯಾಗಿದ್ದು, ದೇವದುರ್ಗ ಹೋಬಳಿ ವ್ಯಾಪ್ತಿಯ ಗ್ರಾಮದಲ್ಲಿ ಅವರ ಮತ್ತೊಂದು ಮೂರ್ತಿ ಅನಾವರಣಗೊಳ್ಳಲಿದೆ. ದೇವದುರ್ಗ ಪಟ್ಟಣದ ಬಸವ ಮೈದಾನದಲ್ಲಿ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮಕ್ಕೆ ದೇವೇಗೌಡರ ಜೊತೆಗೆ ಪಕ್ಷದ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಕೂಡ ಆಗಮಿಸಲಿದ್ದಾರೆ ಎಂದು ತಿಳಿಸಿದರು. 2ನೇ ಪುಟಕ್ಕೆ

## ವಿದ್ಯುತ್ ವಿತರಣಾ ಘಟಕ ಸ್ಥಳಾಂತರಕ್ಕೆ ವಿರೋಧ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.19–**ತಾಲ್ಲೂಕಿನ ಆನೆಹೊಸೂರು ಸೀಮಾಂತರಕ್ಕೆ ಮಂಜೂರಾಗಿದ್ದ 110/11 ಕೆ.ವಿ. ವಿದ್ಯುತ್ ವಿತರಣಾ ಘಟಕವನ್ನು ಸ್ಥಳಾಂತರಿಸುತ್ತಿರುವ ಪ್ರಯತ್ನ ಕೈಬಿಟ್ಟು, ನಿಗದಿತ ಸ್ಥಳದಲ್ಲಿಯೇ ಆರಂಭಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಒತ್ತಾಯಿಸಿದರು.



ಸಹಾಯಕ ಆಯುಕ್ತ ಬಸವಣ್ಣೆಪ್ಪರಿಗೆ ಮನವಿ ಸಲ್ಲಿಸಿ, ಸರಕಾರ ಈಗಾಗಲೇ ಆನೆಹೊಸೂರು ಸೀಮೆಗೆ ವಿದ್ಯುತ್ ವಿತರಣಾ ಘಟಕ ಮಂಜೂರು ಮಾಡಿದ್ದು, ಇದರಿಂದ ನೀರಲಕೇರಿ, ಆನೆಹೊಸೂರು, ಚಿತ್ತಾಪೂರ, ನರಕಲದಿನ್ನಿ, ಖೈರವಾಡಗಿ ಪಂಚಾಯತಿ ವ್ಯಾಪ್ತಿಯ ಹಲವು ಗ್ರಾಮಗಳ ಸಾವಿರಾರು ರೈತರಿಗೆ ಅನುಕೂಲವಾಗಲಿದೆ. ಓರ್ವ ಸಚಿವರ ಹಿತ ಕಾಯಲು ಸಾವಿರಾರು ರೈತರಿಗೆ ಅನ್ಯಾಯ ಮಾಡುವುದು ಎಷ್ಟು ಸರಿ. ಅಲ್ಲದೇ, ಸುಣಕಲ್ ಗ್ರಾಮದಿಂದ ಕೇವಲ 3 ಕಿ.ಮೀ. ಅಂತರದಲ್ಲಿರುವ ರೋಡಲಬಂಡ ಯುಕೆಪಿಯಲ್ಲಿ 110 ಕೆ.ವಿ. ಹಾಗೂ 7 ಕಿ.ಮೀ. ಅಂತರದ ಇಚನಾಳ ಗ್ರಾಮದಲ್ಲಿ 110 ವಿದ್ಯುತ್ ವಿತರಣಾ ಕೇಂದ್ರಗಳಿವೆ. ಆದಾಗ್ಯೂ ಸುಣಕಲ್ ಗ್ರಾಮಕ್ಕೆ ಘಟಕ ಸ್ಥಳಾಂತರ ಮಾಡುತ್ತಿರುವುದು ಖಂಡನೀಯ. ಕೂಡಲೇ ವಾಸ್ತವ ಸ್ಥಿತಿ ಪರಿಶೀಲನೆ ಮಾಡಿ ಘಟಕ ಸ್ಥಳಾಂತರ ಮಾಡದೇ ಯಥಾ ಸ್ಥಿತಿಯಲ್ಲಿ ಮುಂದುವರೆಸಬೇಕು. ಇಲ್ಲವಾದಲ್ಲಿ ಸುಣಕಲ್ ಬಳಿ ನಡೆಯುತ್ತಿರುವ ಆರ್.ಬಿ.ಶುಗರ್ಸ್ ಕಂಪನಿಯ ಕಾಮಗಾರಿ ಸ್ಥಗಿತಕ್ಕೆ ಹೋರಾಟ ರೂಪಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಸಂಘದ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ, ಆನಂದ ಕುಂಬಾರ, ಹನುಮಗೌಡ ಸೇರಿ ಇತರರು ಇದ್ದರು.

## ಪೋಷಕತ್ವ ಮೂಲಭೂತ ಪೋಷಣೆಯ ತತ್ವ: ನಾಗರತ್ನ

**ಯುವ ಮಾರ್ಗ ಸುದ್ದಿ**



**ದೇವದುರ್ಗ,ಜೂ.19–**ಕಾನೂನಿನ ಪ್ರಕಾರ ಪಾಲನೆ–ಪೋಷಣೆ, ರಕ್ಷಣೆಯಿಂದ ವಂಚಿತರಾದ ಮಕ್ಕಳು ಹಾಗೂ ಕುಟುಂಬದ ಆರೈಕೆಯಿಂದ ವಂಚಿತರಾದ ಮಕ್ಕಳಿಗೆ ತಾತ್ಕಾಲಿಕ ಕುಟುಂಬದ ಮೂಲಕ ಸಿಗುವ ಕಾಳಜಿಯೇ ಪೋಷಕತ್ವ ಎಂದು ಜಿಲ್ಲಾ ಸಂಯೋಜಕ ನಾಗರಾಜ್ ಮಾನಸಗಲ್ ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪೋಷಕತ್ವ ಯೋಜನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತೋರಣದಿನ್ನಿ ಮತ್ತು ಪಾಮನಕಲ್ಲೂರು ವಲಯದ ಅಂಗನವಾಡಿ ಕಾರ್ಯಕರ್ತೆಯರಿಗೆ ಉದ್ದೇಶಿಸಿ ಮಾತನಾಡಿದ ಅವರು, ಬಾಲ ನ್ಯಾಯ ಕಾಯ್ದೆ 2015ರ ಕಲಂ 44ರ ಪ್ರಕಾರ, ಪೋಷಕತ್ವ ಯೋಜನೆಯಡಿ ಮಗುವಿನ ಪಾಲನೆ, ಪೋಷಣೆ ಮತ್ತು 2ನೇಪುಟಕ್ಕೆ

## ರಸ್ತೆ ಅಪಘಾತ ಓರ್ವ ಸಾವು

**ಯುವ ಮಾರ್ಗ ಸುದ್ದಿ**



**ಮಾನ್ವಿ.ಜೂ.19–** ತಾಲೂಕಿನ ಕಪಗಲ್ ಹಳ್ಳದ ರಾಜ್ಯ ಹೆದ್ದಾರಿಯಲ್ಲಿ ಬೈಕ್ ಗೆ ಹಿಂಬದಿಯಿಂದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದ ಲ್ಲಿಯೆ ಮೃತಪಟ್ಟ ಘಟನೆ ಗುರುವಾರ ಬೆಳಿಗ್ಗೆ ಜರುಗಿದೆ.

ಮೃತ ದುರ್ದೈವಿ ಬೊಮ್ಮನಾಳ ಗ್ರಾಮದ ನಾಗಪ್ಪ (48) ತಂದೆ ಗಿರಿಯಪ್ಪ ಎನ್ನಲಾಗಿದ್ದು, ತನ್ನ ಪತ್ನಿಯೊಂದಿಗೆ ಮಾನ್ವಿಗೆ ಬೈಕ್ ನಲ್ಲಿ ತೆರಳುತ್ತಿರುವ ವೇಳೆ ಹಿಂಬದಿ ಬರುತ್ತಿದ್ದ ಲಾರಿಯು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ನಾಗಪ್ಪ ಸ್ಥಳದಲ್ಲಿಯೇ ಮೃತಪಟ್ಟಿದ್ದು, ಪತ್ನಿ ದೇವಮ್ಮಗೆ ಗಂಭೀರ ಗಾಯಗಳಾಗಿದ್ದು ಚಿಕಿತ್ಸೆಗಾಗಿ ಮಾನ್ವಿ ತಾಲೂಕ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಘಟನಾ ಸ್ಥಳಕ್ಕೆ ಮಾನ್ಯ ಪೊಲೀಸ್ ಠಾಣೆಯ ಪಿಐ ಸೋಮಶೇಖರ ಕೆಂಚಾರೆಡ್ಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಕರಣ ಮಾನ್ವಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

## 'ಯುವರತ್ನ' ಪ್ರಶಸ್ತಿಗೆ ಗೋಪಾಲ ನಾಯಕ ಜೂಕೂರು ಅಯ್ಕೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.19–**ರಾಯಚೂರಿನ ಜಂಬಲದಿನ್ನಿ ರಂಗಮಂದಿರದಲ್ಲಿ ಜೂ 22ರಂದು ಜರುಗುವ ರಂಗಕುಸುಮ ಸಾಂಸ್ಕೃತಿಕ ಕಲಾ ಸಂಘದಿಂದ ಹಮ್ಮಿಕೊಂಡಿರುವ ಅಕ್ಷರ ಮಾಲೆ ಅದ್ದೂರಿ ಸಾಂಸ್ಕೃತಿಕ ಮನರಂಜನಾ ಕಾರ್ಯಕ್ರಮದಲ್ಲಿ ನೀಡುವ ರಾಜ್ಯಮಟ್ಟದ ಯುವರತ್ನ' ಪ್ರಶಸ್ತಿಗೆ ಯುವ ಸಾಹಿತಿ & ಶಿಕ್ಷಕ ಗೋಪಾಲ ನಾಯಕ ಜೂಕೂರು ಭಾಜನರಾಗಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ಸಿದ್ದೇಶ್ ವಿರಕ್ತಮಠ ತಿಳಿಸಿದ್ದಾರೆ.

ಸಮಾಜಮುಖಿ ಕಾರ್ಯಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ ಗೋಪಾಲ ನಾಯಕ ಜೂಕೂರು ರವರು ಶಿಕ್ಷಣ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಮಾಡಿದ ಸೇವೆ ನೂರಾರು ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತವಾಗಿ ತರಬೇತಿ ನೀಡುತ್ತಿರುವುದು ಅವರ ಕಾರ್ಯ ಶ್ಲಾಘನೀಯ. ಜೊತೆಗೆ ಎರಡು ಕವನ ಸಂಕಲನಗಳು ಹಾಗೂ ಹಲವು ಲೇಖನಗಳು ಅವರು ಬರೆದಿರುವವುದರ ಮೂಲಕ ಸಾಹಿತ್ಯ



ಕ್ಷೇತ್ರದಲ್ಲಿ ಕನ್ನಡ ನಾಡು ನುಡಿಗೆ ನೀಡಿದ ಕೊಡುಗೆ ಹಾಗೂ ಭಾಷಣಕಾರರಾಗಿ ನೂರಾರು ಕಾರ್ಯಕ್ರಮಗಳಲ್ಲಿ ಉಪನ್ಯಾಸ ನೀಡಿರುವುದು ಅವರ ಬಹುಮುಖ ಪ್ರತಿಭೆ ಗುರುತಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಇದೇ ಜೂನ್ 22 ರಂದು ನಡೆಯಲಿರುವ ರಾಯಚೂರಿನ ರಂಗಮಂದಿರದಲ್ಲಿ ಅಕ್ಷರ ಮಾಲೆ' ಕಾರ್ಯಕ್ರಮದಲ್ಲಿ ಅವರಿಗೆ ಸಚಿವರ , ಗಣ್ಯರ ಸಮ್ಮುಖದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಸಾಧನೆಗೈದ ಸಾಧಕರಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷ ಸಿದ್ದೇಶ್ ವಿರಕ್ತಮಠ ತಿಳಿಸಿದ್ದಾರೆ.

## ಹೈ ಮಾಸ್ಟ್ ವಿದ್ಯುತ್ ದೀಪ ಉದ್ಘಾಟನೆ ಕ್ಷೇತ್ರದ ಅಭಿವೃದ್ಧಿಗೆ ಬದ್ದ : ಶರಣಗೌಡ ಪಾಟೀಲ್ ಬಯ್ಯಾಪೂರ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.19–** ಕ್ಷೇತ್ರದಲ್ಲಿ 51 ಲಕ್ಷ ರೂಪಾಯಿಗಳ ಅನುದಾನದಲ್ಲಿ ಲಿಂಗಸಗೂರು ಪಟ್ಟಣದ ವಿವಿಧ ವಾರ್ಡ್ ಹಾಗೂ ಸರ್ಜಾಪುರದಲ್ಲಿ ಹೈ ಮಾಸ್ ವಿದ್ಯುತ್ ದೀಪವನ್ನು ಅಳವಡಿಸಿ ತಾಲೂಕಿನ ಅಭಿವೃದ್ಧಿಗೆ ಬದ್ಧನ್ನಾಗಿದ್ದೇನೆ ಎಂದು ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಹೇಳಿದರು.

ಪಟ್ಟಣದಲ್ಲಿ ಹಾಗೂ ಸಮೀಪದ ಸರ್ಜಾಪುರದಲ್ಲಿ 2023–24 ನೇ ಸಾಲಿನ ಮ್ಯಾಕ್ರೋ ಹೈ– ವಿದ್ಯುತ್ ದೀಪ ಉದ್ಘಾಟನೆ ಮಾಡಿ ಮಾತನಾಡಿದ ಅವರು, ನಾನು ಕ್ಷೇತ್ರದ ಅಭಿವೃದ್ಧಿಗೆ ಬದ್ಧನ್ನಾಗಿದ್ದು,ಇನ್ನೂ ಮುಂದಿನ ದಿನಮಾನಗಳಲ್ಲಿ ವಿವಿಧ ಬಡಾವಣೆಗಳಿಗೆ ನನ್ನ ಅನುದಾನದಲ್ಲಿ ಉಳಿದ ಕಾಮಗಾರಿಗಳಿಗೆ ಹಣವನ್ನು ನೀಡುತ್ತೇನೆಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನ ಗೌಡ ಪಾಟೀಲ್ ಕರಡಕಲ್, ಜಿಲ್ಲಾ ಗ್ಯಾರೆಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ, ಜಿ ಗುಂಡಪ್ಪ ನಾಯಕ್, ಸೋಮಶೇಖರ ಐದನಾಳ, ಶಶಿಧರ್ ಪಾಟೀಲ್, ಅನಿಷ ಪಾಷಾ ಇಬ್ರಾಹಿಂ ಗ್ಯಾರಂಟಿ, ರಾಜುಗೌಡ ಪಾಟೀಲ್ ಜಾವೂರ, ಪಿಡಿಒ ಶೋಭಾರಾಣಿ, ಡಾ: ರುದ್ರಗೌಡ ಪಾಟೀಲ್, ನಾಗರಾಜ ಗೊರೆಬಾಳ, ಬಸವರಾಜ ನಾಗರಾಳ, ಚನ್ನಾರೆಡ್ಡಿ ಬಿರಾದರ ಸೇರಿದಂತೆ ಇದ್ದರು.

ಯುವ ಮಾರ್ಗ



ಮೊದಲನೇಯ ಪುಟದಿಂದ

# ಜೂನ್ 27ಕ್ಕೆ ದೇವದುರ್ಗಕ್ಕೆ ಹೆಚ್.ಡಿ.ದೇವೆಗೌಡ ಆಗಮನ

**ಕೈಗಾರಿಕಾ ಅಭಿವೃದ್ಧಿಗೆ ಭರವಸೆ:** ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ನಮ್ಮ ಭಾಗದಲ್ಲಿ ಕೈಗಾರಿಕಾ ಉದ್ಯಮಕ್ಕೆ ಸಹಕಾರ ನೀಡಬೇಕೆಂದು ಮನವಿ ಮಾಡಿಕೊಂಡಿದ್ದು, ಇದಕ್ಕೆ ಸಕಾರಾತ್ಮಕ ಸ್ಪಂದನೆ ದೊರೆತಿದೆ. ಮುಂಬರುವ ದಿನಗಳಲ್ಲಿ ನಮ್ಮ ಭಾಗದಲ್ಲಿ ಕೈಗಾರಿಕೆಗಳು ಸ್ಥಾಪನೆ ಆಗುವ ವಿಶ್ವಾಸವಿದೆ ಎಂದು ಜೆಡಿಎಸ್ ಪಕ್ಷದ ಮಹಾ ಪ್ರಧಾನ ಕಾರ್ಯದರ್ಶಿ ವೆಂಕಟರಾವ್ ನಾಡಗೌಡ ಹೇಳಿದರು.

ಈ ಸಂದರ್ಭದಲ್ಲಿ ಸ್ಥಳೀಯ ಶಾಸಕಿ ಕರೆಮ್ಮ ಜಿ. ನಾಯಕ, ಜೆಡಿಎಸ್ ಪಕ್ಷದ ಮುಖಂಡರಾದ ಮಹಾಂತೇಶ ಪಾಟೀಲ್ ಅತ್ತನೂರು, ಅಮರೇಶ ಪಾಟೀಲ್ ಪರತಪೂರ, ಚಂದ್ರಶೇಖರ ಪಾಟೀಲ್ ಜಾಡಲದಿನ್ನಿ, ಸಿದ್ದಣ್ಣ ಗಣೇಕಲ್, ವೆಂಕಟೇಶ ಗೌಡ, ಇಸಾಕ್‌ಸಾಬ ಮೇಸ್ತ್ರಿ, ನಾಗಪ್ಪ ಪಾಮರತಿ, ಶರಣಪ್ಪ ಬಳೆ, ಶಾಲಂಉದ್ದಾರ, ಸಿದ್ದಲಿಂಗಪ್ಪ ಗೌಡ ನಾಗಡದಿನ್ನಿ, ಗುರುನಾಥ ಪಾಟೀಲ್, ಹನುಮಂತ್ರಾಯ ಚಿಂತಲಕುಂಟಿ, ಚೆನ್ನಪ್ಪ ಗೆಜ್ಜೆಬಾವಿ, ಪ್ರಭು ದೊರೆ, ಶಿವನಗೌಡ ಕಕ್ಕಲದೊಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪೋಷಕತ್ವ ಮೂಲಭೂತ ಪೋಷಣೆಯ ತತ್ವ: ನಾಗರತ್ನ

ರಕ್ಷಣೆಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ಜೈವಿಕ ಕುಟುಂಬವಲ್ಲದ ಬೇರೊಂದು ಕುಟುಂಬಕ್ಕೆ ತಾತ್ಕಾಲಿಕ ಅಥವಾ ವಿಸ್ತರಿಸಿದ ಅವಧಿಯವರೆಗೆ (ಎರಡು ವರ್ಷಕ್ಕೆ ಮೀರದಂತೆ) ಮಗುವನ್ನು ಒದಗಿಸಿಕೊಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಿರವಾರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಾಗರತ್ನ ಅವರು ಮಾತನಾಡಿ, ಪೋಷಕತ್ವ ಎಂಬುದು ನಿರಂತರವಾಗಿ ವಿಕಸನಗೊಳ್ಳುತ್ತಿರುವ ಪ್ರಕ್ರಿಯೆಯಾಗಿದ್ದು, ಕೇವಲ ಮಗುವಿನ ಮೂಲಭೂತ ಪೋಷಣೆ ಮತ್ತು ಅಗತ್ಯಗಳನ್ನು ಒದಗಿಸುವುದಕ್ಕೆ ಮಾತ್ರ ಸೀಮಿತವಲ್ಲ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮಹಾಂತಮ್ಮ ಅಂಗನವಾಡಿ ಮೇಲ್ವಿಚಾರಕರು ಹಾಗೂ ಪಾಮನಕಲ್ಲೂರು ಮತ್ತು ತೋರಣದಿನ್ನಿ ವಲಯದ ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಗೊಂದಲದ ಗೂಡಾದ ಬಿಜೆಪಿ– ಜೆಡಿಎಸ್ ಮೈತ್ರಿ

**ಬೆಂಗಳೂರು,ಜೂ.19–** ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಗೊಂದಲದ ಗೂಡಾಗಿದೆ. ಎಲ್ಲವೂ ಸರಿ ಇದೆ, ಮೈತ್ರಿ ಯಶಸ್ವಿಯಾಗಿದೆ ಎಂದು ಕೆಲವರು ಬಹಿರಂಗವಾಗಿ ಹೇಳುತ್ತಿದ್ದರೂ ಗೊಂದಲ, ಭಿನ್ನಾಭಿಪ್ರಾಯ ಹಾಗೂ ಅಂತರ ಎದ್ದು ಕಾಣುವಂತಿದೆ. ಹೀಗಿರುವಾಗ ಮೈತ್ರಿ ಗಟ್ಟಿಗೊಳಿಸಲು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ರಾಜ್ಯ ನಾಯಕರಿಗಿಂತ ಹೈಕಮಾಂಡ್ ನಾಯಕರನ್ನೆ ಹೆಚ್ಚಾಗಿ ನೆಚ್ಚಿಕೊಂಡಿ ದ್ದಾರೆ. ಇದು ಕಮಲ ಪಡೆಗೂ ಇರುಸು–ಮುರುಸು ತಂದಿದೆ.

ಬಿಜೆಪಿ ಜೆಡಿಎಸ್ ಮೈತ್ರಿಯಲ್ಲಿರುವ ಗೊಂದಲದ ಬಗ್ಗೆ ಎಚ್‌ಡಿಕೆ ಮೌನ ವಹಿಸಿದ್ದರು. ಯಾವುದೇ ಹೇಳಿಕೆಗಳನ್ನು ನೀಡುತ್ತಿರಲಿಲ್ಲ. ಆದರೆ ದಿನಗಳ ಹಿಂದೆ ನಡೆದಿದ್ದ ಜೆಡಿಎಸ್ ಕಾರ್ಯಕ್ರಮದಲ್ಲಿ ಮೌನ ಮುರಿದಿದ್ದರು. ಚುನಾವಣಾ ಸಂದರ್ಭದಲ್ಲಿ ಕೇಂದ್ರದಿಂದ ಸೀಟ್ ತರುವುದು ನನ್ನ ಜವಾಬ್ದಾರಿ ಎನ್ನುವ ಮೂಲಕ ಕಾರ್ಯಕರ್ತರಿಗೆ ಹುಮಸ್ಸು ಕೊಟ್ಟು ಪರೋಕ್ಷವಾಗಿ ರಾಜ್ಯ ಬಿಜೆಪಿ ನಾಯಕರಿಗೆ ಕೌಂಟರ್ ಕೊಟ್ಟಿದ್ದರು. ಇದು ಇದೀಗ ಕಮಲ ಪಡೆಯ ನಿದ್ದೆಗೆಡಿಸಿದೆ.

ಹೌದು, ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕ ರಾಜ್ಯದಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿಯಾಗಿ ಹೆಚ್ಚು ಸಂಸದ ಸ್ಥಾನ ಗೆಲ್ಲುವಲ್ಲಿ ಯಶಸ್ವಿಯಾಗಿತ್ತು. ಅದರ ಮುಂದುವರಿದ ಭಾಗವಾಗಿ ಕೇಂದ್ರದಲ್ಲಿ ಮಂತ್ರಿಯಾಗುವ ಮೂಲಕ ಕುಮಾರಸ್ವಾಮಿ ಬಿಜೆಪಿ–ಜೆಡಿಎಸ್ ಮೈತ್ರಿ ಮತ್ತಷ್ಟು ಗಟ್ಟಿಯಾಗಿದೆ ಅನ್ನುವ ಸಂದೇಶ ರವಾನೆ ಮಾಡಿದ್ದರು.

ಆದರೆ ಕಳೆದ ಕೆಲ ತಿಂಗಳ ಹಿಂದೆ ರಾಜ್ಯ ಬಿಜೆಪಿ ನಾಯಕರ ಜೊತೆ ಜೆಡಿಎಸ್ ಪಕ್ಷದ ಸಂಬಂಧ ಅಷ್ಟು ಸರಿ ಇಲ್ಲ ಅನ್ನೊದು ಹಲವು ಬಾರಿ ಬೆಳಕಿಗೆ ಬಂದಿದೆ. ಪ್ರತ್ಯೇಕ ಹೋರಾಟ ಮಾಡುವ ಮೂಲಕ ಬಿಜೆಪಿ ಜೆಡಿಎಸ್‌ನಿಂದ ಅಂತರ ಕಾಯ್ದುಕೊಂಡಿತ್ತು. ಈ ಬಗ್ಗೆ ಕಮಲದ ನಾಯಕರು ಭಿನ್ನ ಹೇಳಿಕೆಗಳನ್ನು ನೀಡುತ್ತಿದ್ದರು. ಸಹಜವಾಗಿ ಬಿಜೆಪಿ ರಾಜ್ಯ ನಾಯಕರ ನಡೆ ಜೆಡಿಎಸ್ ಮುಖಂಡರ ಅಸಮಾಧಾನಕ್ಕೆ ಕಾರಣವಾಗಿತ್ತು.

**ಮೌನಕ್ಕೆ ಜಾರಿದ್ದ ಎಚ್‌ಡಿಕೆ:** ಇಷ್ಟೆಲ್ಲಾ ಬೆಳವಣಿಗೆಗಳು ನಡೆಯುತ್ತಿದ್ದರೂ ಕುಮಾರಸ್ವಾಮಿ ಮಾತ್ರ ಮೌನವಾಗಿದ್ದರು. ಬಹಿರಂಗ ಹೇಳಿಕೆ ಕೊಟ್ಟು ಮೈತ್ರಿ ಸಂಬಂಧ ಕೆಡಿಸುವ ಪ್ರಯತ್ನ ಮಾಡಿರಲಿಲ್ಲ. ಆದರೆ ಬೆಂಗಳೂರಿನಲ್ಲಿ ನಡೆದ ಪಕ್ಷದ ಕಾರ್ಯಕ್ರಮದಲ್ಲಿ ಅವರು ಆಡಿದ ಒಂದಷ್ಟು ಮಾತುಗಳು ಮತ್ತು ರಾಜ್ಯ ಬಿಜೆಪಿ ನಾಯಕರಿಗೆ ಕೊಟ್ಟ ಪರೋಕ್ಷ ಕೌಂಟರ್‌ಗಳು ಸಾಕಷ್ಟು ಚರ್ಚೆಯಾಗುತ್ತಿವೆ.

ಎರಡು ದಿನಗಳ ಹಿಂದೆ ಬೆಂಗಳೂರಿನ ಜೆಡಿಎಸ್ ಕಚೇರಿಯಲ್ಲಿ ಜನರೊಂದಿಗೆ ಜನತಾದಳ ಅಭಿಯಾನ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಇದೇ ವೇಳೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಎಚ್.ಡಿ.ಕುಮಾರಸ್ವಾಮಿ ಅವರು ತಮ ಭಾಷಣದಲ್ಲಿ ಜೆಡಿಎಸ್ ಮುಗಿದು ಹೋಗಿದೆ ಬನ್ನಿ ನಮ ಜೊತೆ ಎಂದು ಸಿಎಂ ಹೇಳ್ತಾರಲ್ಲ,ಇಲ್ಲಿ ಜನ ಸೇರಿರುವುದು ನೋಡಿದರೆ ಅವರಿಗೆ ಇಂದು ಉತ್ತರ ಸಿಕ್ಕಿದೆ.



ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಜೆಡಿಎಸ್ ಬಿಜೆಪಿ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ. ಸ್ಥಳೀಯವಾಗಿ ಮೂರ್ನಾಲ್ಕು ಜನ ಮಾತಾಡೋದಕ್ಕೆ ತಲೆ ಕೆಡಿಸಿಕೊಳ್ಳಬೇಡಿ. ಮೈತ್ರಿಯಲ್ಲಿ ಗೊಂದಲ ಇಲ್ಲ, ಸೀಟ್ ತರೋದು ನನ್ನ ಜವಾಬ್ದಾರಿ. ಕ್ಷೇತ್ರ ಗಟ್ಟಿ ಮಾಡಿಕೊಳ್ಳಿ, ನಾನ್ ಸೀಟ್ ತರುತ್ತೆನೆ ಎಂದಿದ್ದರು. ಈ ಮೂಲಕ ಎಲ್ಲವೂ ಕೇಂದ್ರ ಬಿಜೆಪಿ ನಿರ್ಧಾರ ಮಾಡಲಿದೆ ಎಂಬ ಸಂದೇಶ ರವಾನಿಸಿದ್ದರು.

ರಾಜ್ಯದಲ್ಲಿ ಮೈತ್ರಿ ಸೇರಿದಂತೆ ಎಲ್ಲವೂ ಕೇಂದ್ರದಲ್ಲಿ ನಿರ್ಧಾರವಾಗುತ್ತದೆ ಅನ್ನುವ ಕುಮಾರಸ್ವಾಮಿ ಮಾತುಗಳು ರಾಜ್ಯ ಬಿಜೆಪಿ ಕೆಲ ನಾಯಕರಿಗೆ ಪರೋಕ್ಷವಾಗಿ ಎಚ್ಚರಿಕೆ ಸಂದೇಶ ರವಾನೆ ಮಾಡಿದಂತಿದೆ. ಕುಮಾರಸ್ವಾಮಿಯ ಈ ಮಾತುಗಳಿಗೆ ಬಿಜೆಪಿ ಪಾಳೆಯದಲ್ಲಿ ಸಾಕಷ್ಟು ಚರ್ಚೆ ಜೋರಾಗಿದ್ದು ವಿಪಕ್ಷ ನಾಯಕ ಆರ್.ಅಶೋಕ್ ಸೇರಿದಂತೆ ಕೆಲ ನಾಯಕರು ಪ್ರತಿಕ್ರಿಯೆ ಕೂಡ ನೀಡಿದ್ದಾರೆ.

ಬಿಜೆಪಿ ಜೆಡಿಎಸ್ ಸಂಬಂಧ ಹಾಲು ಜೇನಿನಂತೆ ಇದೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಪ್ರತಿಕ್ರಿಯೆ ನೀಡಿದ್ದಾರೆ. ಮುಂದೆ ಬಿಜೆಪಿ ಜೆಡಿಎಸ್ ಸರ್ಕಾರ ಅಧಿಕಾರಕ್ಕೆ ಬರೋದು ನಿಶ್ಚಿತ. ಕುಮಾರಸ್ವಾಮಿ ಅವರು ಯಾವ ಅರ್ಥದಲ್ಲಿ ಯಾರಿಗೆ ಮಾತನಾಡಿದ್ದಾರೆ ಗೊತ್ತಿಲ್ಲ. ಅವರ ನಮ ಸಂಬಂಧ ತುಂಬಾ ಚೆನ್ನಾಗಿದೆ. ಮೊನ್ನೆಯಷ್ಟೆ ಮಾಜಿ ಪ್ರಧಾನಿ ದೇವೇಗೌಡರ ಭೇಟಿಯಾಗಿ ಬಂದಿದ್ದೇನೆ ,ಅಷ್ಟೆ ಅಲ್ಲದೆ ನಿರಂತರವಾಗಿ ಕುಮಾರಸ್ವಾಮಿ ನಾವು ಸಂಪರ್ಕದಲ್ಲಿದ್ದೇವೆ ಎಂದಿದ್ದಾರೆ.

ಇನ್ನುಸ್ಥಳೀಯ ಮಟ್ಟದಲ್ಲಿ ಕೆಲ ನಾಯಕರು ಒಂದಷ್ಟು ಹೇಳಿಕೆಗಳನ್ನು ನೀಡಿರಬಹುದು,ಆದರೆ ನಮ ಮೈತ್ರಿಯಲ್ಲಿ ಯಾವುದೇ ಗೊಂದಲ ಇಲ್ಲ.ಮುಂದೆ ಬಿಜೆಪಿ ಜೆಡಿಎಸ್ ಮೈತ್ರಿ ಸರ್ಕಾರವೇ ಅಧಿಕಾರಕ್ಕೆ ಬರೋದು ಎಂದು ತಮ ನಿಲುವು ಸ್ಪಷ್ಟಪಡಿಸಿದ್ದಾರೆ.


**ಭಿನ್ನ ಹೇಳಿಕೆ ಕೊಟ್ಟ ಸುನೀಲ್‌ಕುಮಾರ್!:** ಬಿಜೆಪಿ–ಜೆಡಿಎಸ್ ಸರ್ಕಾರ ಬರುತ್ತದೆ, ಲೋಕಲ್ ಮೂರ್ನಾಲ್ಕು ಜನರ ಮಾತಿಗೆ ತಲೆ ಕೆಡಿಸಿಕೊಳ್ಳಬೇಡಿ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ಶಾಸಕ ಸುನಿಲ್ ಕುಮಾರ್ ಚುನಾವಣೆಗೆ ಇನ್ನೂ ಮೂರು ವರ್ಷ ಇದೆ. ನಮ ಸಂಸದೀಯ ಸಮಿತಿ ಇದೆ,ಎಲ್ಲವೂ ಅವರು ತೀರ್ಮಾನ ಮಾಡುತ್ತಾರೆ. ಈಗ ಯಾವುದೂ ಚರ್ಚೆ ಬೇಕಾಗಿಲ್ಲ ಅನ್ನುವ ಮೂಲಕ ಸುನಿಲ್ ಪರೋಕ್ಷವಾಗಿ ಸದ್ಯಕ್ಕೆ ಕುಮಾರಸ್ವಾಮಿ ಮಾತುಗಳು ಅಪ್ರಸ್ತುತ ಎಂದಿದ್ದಾರೆ.

## ಮನೆ ಬೀಗ ಮುರಿದು 1.40 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಜೂ.19–**ಮನೆ ಬೀಗ ಮುರಿದು 1.40 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ನಗರದ ಸ್ಟೇಷನ್ ಏರಿಯಾದಲ್ಲಿ ನಡೆದಿದೆ.

ನವಾಮಿಯಾ ಎಂಬುವವರ ಮನೆ ಬೀಗ ಮುರಿದು 1 ಲಕ್ಷ ರೂ.ನಗದು, 20 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಎರಡು ಜೊತೆ ಬಂಗಾರದ ಕಿವಿಯೋಲೆಗಳು, 20 ಸಾವಿರ ರೂ.ಮೌಲ್ಯದ 5 ಗ್ರಾಂ.ನ ಎರಡು ಸುತ್ತುಂಗುರಗಳು ಸೇರಿ 40 ಸಾವಿರ ರೂ.ಮೌಲ್ಯದ 2 ತೊಲೆ ಬಂಗಾರದ ಆಭರಣ ಕಳವು ಮಾಡಿದ್ದಾರೆ.

ಇವರು ಮನೆಗೆ ಬೀಗ ಹಾಕಿಕೊಂಡು ಪುಣೆಯಲ್ಲಿರುವ




ಸಂಬಂಧಿಕರರ ಮದುವೆ ಸಮಾರಂಭಕ್ಕೆ ಹೋದ ವೇಳೆ ಕಳ್ಳರು ಮನೆ ಬೀಗ ಮುರಿದು ಚಿನ್ನಾಭರಣ ಕಳವು ಮಾಡಿಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ.ಈ ಸಂಬಂಧ ನವಾಮಿಯಾ ಅವರು ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿ 05 ಕೆ.ಜಿ ಅಕ್ಕಿ ವಿತರಣೆ

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.19–** ಜೂನ್ 2025 ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಸಾರವರ್ಧಿತ ಅಕ್ಕಿ ಮತ್ತು 14 ಕೆ.ಜಿ ಜೋಳ ಹಾಗೂ ಕೇಂದ್ರ ವ್ಯಾಪ್ತಿಯ ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಸಾರವರ್ಧಿತ ಅಕ್ಕಿ ಮತ್ತು 02 ಕೆ.ಜಿ ಜೋಳ ಮತ್ತು ರಾಜ್ಯ ವ್ಯಾಪ್ತಿಯ ಪಡಿತರ ಚೀಟಿದಾರರಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ(ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಒಂದು ರಾಷ್ಟ್ರ ಒಂದು ಪಡಿತರ ಚೀಟಿ(ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು



ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

# 11ನೇ ಅಂತಾರಾಷ್ಟ್ರೀಯ ಯೋಗ ದಿನ: ವಿದ್ಯಾರ್ಥಿಗಳಿಗೆ ಯೋಗ ಸ್ಪರ್ಧೆ

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.19–** 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಯೋಗದ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಮತ್ತು ದೈಹಿಕ ಮತ್ತು ಮಾನಸಿಕ ಆರೋಗ್ಯದ ಮಾಹಿತಿ ನೀಡುವ ಹಿನ್ನೆಲೆಯಲ್ಲಿ ಆಯುಷ್ ಇಲಾಖೆ ಬೆಂಗಳೂರು, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆ ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜೂನ್ 18ರಂದು ಯೋಗ ಸ್ಪರ್ಧೆ ನಡೆಯಿತು.

ಆಯುಷ್ ಇಲಾಖೆಯ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮವನ್ನು ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿಗಳಾದ ಡಾ. ಶಂಕರಗೌಡ ಅವರು ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳಿಗೆ ಯೋಗ ಅದರ ಮಹತ್ವ ಅದನ್ನು ದಿನನಿತ್ಯದಲ್ಲಿ ಅಳವಡಿಸಿಕೊಂಡಲ್ಲಿ ಆಗುವ ಲಾಭಗಳು, ಜೊತೆಗೆ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಹಾಕಿಕೊಂಡಿರುವ ಕಾರ್ಯಕ್ರಮಗಳ



ಕುರಿತು ಮಾಹಿತಿ ನೀಡಿದರು. ಈ ವರ್ಷದ ಘೋಷವಾಕ್ಯ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಆಗಿದ್ದು ವಿದ್ಯಾರ್ಥಿಗಳು ಯೋಗ ಅಭ್ಯಾಸವನ್ನು ಕಲಿಯಿರಿ ಆರೋಗ್ಯವನ್ನು ವೃದ್ದಿಸಿಕೊಳ್ಳಿರಿ ಎಂದು ತಿಳಿಸಿದರು.

ಮುಖ್ಯ ಅತಿಥಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಸಂಚಾಲಕರಾದ ಡಾ.ದಂಡಪ್ಪ ಬಿರಾದಾರ್ ಮಾತನಾಡಿ, ವಿಶ್ವದಲ್ಲಿ ಸಾರ್ವತ್ರಿಕವಾಗಿ ಅಂತಾರಾಷ್ಟ್ರೀಯ ಯೋಗ ದಿನವನ್ನು ಜೂನ್ 21 ರಂದು ಆಚರಣೆ ಮಾಡಲಾಗುತ್ತದೆ. ಅನಾದಿ ಕಾಲದಿಂದಲೂ ಯೋಗ ಸಾಧನೆಗೆ ಅತಿ ಮಹತ್ವವಿದೆ. ದೀರ್ಘ ಕಾಲದವರೆಗೆ ಆರೋಗ್ಯವಂತರಾಗಿ ಬಾಳಲು ಯೋಗ ಸಹಕಾರಿಯಾಗಿದೆ. ಇದೀಗ ಜಗತ್ತಿನ ನೂರಾರು ರಾಷ್ಟ್ರಗಳಲ್ಲಿ ಈ ದಿನಾಚರಣೆಯನ್ನು ಆಚರಣೆ ಮಾಡುತ್ತಿರುವುದು ಹೆಮ್ಮೆಯ ವಿಷಯ. ವಿದ್ಯಾರ್ಥಿಗಳು ಇಂದು ಆರೋಗ್ಯವಿತವಾದ ಅಭ್ಯಾಸವನ್ನು ರೂಡಿ ಮಾಡಿಕೊಂಡು ತಮ್ಮ ಆರೋಗ್ಯವನ್ನು ಸದೃಢಪಡಿಸಿಕೊಳ್ಳಿರಿ ಎಂದು ಹೇಳಿದರು.

ಯೋಗ ತರಬೇತಿದಾರ ಡಾ.ತಿಮಪ್ಪ ವಡ್ಡೆಪಳ್ಳಿ ಅವರು 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಹಿನ್ನೆಲೆಯಲ್ಲಿ ಹಾಕಿಕೊಂಡ ಕಾರ್ಯಕ್ರಮಗಳ ಮಾಹಿತಿ ಮತ್ತು ಈ ಸ್ಪರ್ಧೆಗೆ ಇರುವಂತ ನಿಯಮಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ವೇದಿಕೆ ಮೇಲೆ ಡಾ.ಪೂಜಾ, ಡಾ.ನವೀನ್, ಡಾ.ಅರ್ಪಿತ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಆಯುಷ್ ಇಲಾಖೆಯ ಶ್ರೀಮತಿ ಸಂಗಮ್ಮ ಪ್ರಾರ್ಥಿಸಿದರು. ಹನುಮಂತ ಸ್ವಾಗತಿಸಿ ನಿರೂಪಿಸಿದರು.


# ಸ್ಮಶಾನ ಬೇರೆ ಕಡೆಗೆ ಸ್ಥಳಾಂತರ ಮಾಡಲು ಒತ್ತಾಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.19–** ಪಟ್ಟಣದ ಸರಕಾರಿ ಆದರ್ಶ ವಿದ್ಯಾಲಯದ ಆವರಣದ ಮುಂದೆ ಇರುವ ಸ್ಮಶಾನವನ್ನು ಬೇರೆ ಕಡೆಗೆ ಸ್ಥಳಾಂತರಿಸಬೇಕು ಎಂದು ಆದರ್ಶ ವಿದ್ಯಾಲಯದ ಶಾಲಾ ಅಭಿವೃದ್ಧಿ ಸಮಿತಿಯಿಂದ ಪಟ್ಟಣದ ಮುಖಂಡರು ಗುರುವಾರ ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿಯವರಿಗೆ ಮನವಿ ಸಲ್ಲಿಸಿದರು.

ಆದರ್ಶ ಶಾಲೆಯ ಮುಂಭಾಗದಲ್ಲಿ ಜೂ.18 ರಂದು ಶಾಲಾ ಪ್ರವೇಶದ ದ್ವಾರಕ್ಕೆ ತಾಗಿಕೊಂಡು ಶವವನ್ನು ಹೂಳಿರುತ್ತಾರೆ. ಇದರಿಂದ ಶಾಲೆಗೆ ದಿನನಿತ್ಯ ಬರುವ 6 ರಿಂದ 10ನೇ ತರಗತಿ ವರಗಿನ ಮಕ್ಕಳು ಭಯ ಪಡುತ್ತಿದ್ದಾರೆ. ಶಾಲಾ ಅವಧಿಯಲ್ಲೂ ಶವವನ್ನು ಬ್ಯಾಂಡ್ ಸಪ್ಪಳ ಮಾಡುತ್ತಾ ಬರುವ ಸದ್ದು ಹಾಗೂ ಅಳುವ ಸದ್ದು ಶಾಲೆಯಲ್ಲಿ ಕೇಳಿ ಬರುತ್ತದೆ. ಇದರಿಂದ ಶಾಲಾ ಶಿಕ್ಷಕರಿಗೆ ಪಾಠ ಬೋಧಿಸಲು ಮತ್ತು ಮಕ್ಕಳಿಗೆ ಪಾಠ ಕೇಳಲು ತುಂಬಾ ತೊಂದರೆಯಾಗುತ್ತದೆ. ಈ ವೇಳೆಯೂ ಮಕ್ಕಳು ಭಯಪಡುತ್ತಿದ್ದಾರೆ.

ಮಕ್ಕಳ ಶೈಕ್ಷಣಿಕ ಭವಿಷ್ಯ ಹಿತದೃಷ್ಟಿಯಿಂದ ಶಾಲಾ



ಮುಂಭಾಗದಲ್ಲಿ ಶವ ಸಂಸ್ಕಾರ ಬಂದಗೊಳಿಸಿ ಶವ ಹೂಳಲು ಬೇರೆ ಕಡೆ ಜಾಗವನ್ನು ನೀಡಿ ಮಕ್ಕಳಿಗೆ ಕಲಿಕಾ ವಾತಾವರಣ ಕಲ್ಪಿಸಲು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಸ್ ಡಿ ಎಂ ಸಿ ಅಧ್ಯಕ್ಷ ಅಮರೇಶ ಗಂಭೀ ರಮತ, ಬಸವರಾಜ ಹೊಸೂರ, ಡಾ.ಮಹಮ್ಮದ್ ಜಾವೀದ್, ಹನುಮಂತಪ್ಪ ಕನ್ನಾಳ, ವಿಜಯಕುಮಾರ್, ಗೀತಾ ಕೆಂಭಾವಿ, ಭಾರತಿ,ವೀರೇಶ್ ಪವಾರ ಸೇರಿದಂತೆ ಇತರರು ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಕದನ ವಿರಾಮದ ಬಗ್ಗೆ ಪ್ರಧಾನಿ ನಿಲುವಿನ ಕುರಿತು ಅನೇಕ ಸಂಶಯಗಳಿವೆ : ದಿನೇಶ್ ಗುಂಡೂರಾವ್

**ಬೆಂಗಳೂರು, ಜೂ.19–**ಪಾಕಿಸ್ತಾನದ ವಿರುದ್ಧ ಕದನ ವಿರಾಮ ಘೋಷಿಸಿದ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ನಿಲುವಿನ ಬಗ್ಗೆ ಅನೇಕ ಸಂಶಯಗಳಿವೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸಂಸತ್ತಿನ ವಿಶೇಷ ಅಧಿವೇಶನ ಕರೆದು ಪ್ರಧಾನಿಯವರು ತಮ್ಮ ನಿಲುವನ್ನು ಸ್ಪಷ್ಟಪಡಿಸಬೇಕು. ಜೊತೆಗೆ ಕದನ ವಿರಾಮ ವಿಚಾರದಲ್ಲಿ ಅಮೆರಿಕ ಪಾತ್ರವೇನಿತ್ತು? ಎಂದು ದೇಶದ ಜನರಿಗೆ ತಿಳಿಸಬೇಕು. ಈ ಧೈರ್ಯ ಮೋದಿಯವರಿಗೆ ಇದೆಯೇ? ಎಂದು ಪ್ರಶ್ನಿಸಿದ್ದಾರೆ.

ಅಮೇರಿಕಾದ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರ ಜೊತೆಗೆ ಪ್ರಧಾನಿ ಮೋದಿ ದೂರವಾಣಿ ಸಂಭಾಷಣೆ ನಡೆಸಿದ್ದಾರಂತೆ. ಈ ವೇಳೆ ಭಾರತ ಯಾರ ಮಧ್ಯಸ್ಥಿಕೆಯನ್ನು ಒಪ್ಪಲ್ಲ ಎಂದು ಮೋದಿ ಅವರು ಟ್ರಂಪ್ ಅವರಿಗೆ ಕಡ್ಡಿ ಮುರಿದಂತೆ ಹೇಳಿದ್ದಾರಂತೆ.

ಹೀಗಂತ ಹೇಳಿರುವುದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್



ಮಿಸ್ತ್ರಿ. ಆದರೆ ವಿಕ್ರಮ್ ಮಿಸ್ತ್ರಿ ಹೇಳಿಕೆಯನ್ನು ಯಾವ ಆಧಾರದಲ್ಲಿ ನಂಬುವುದು? ಯಾಕೆಂದರೆ ಮಿಸ್ತ್ರಿ ಈ ಹೇಳಿಕೆ ಕೊಟ್ಟ ಬೆನ್ನಲ್ಲೇ ಟ್ರಂಪ್ ನನ್ನ ಮಧ್ಯಸ್ಥಿಕೆಯಲ್ಲೇ ಕದನ ವಿರಾಮ ಏರ್ಪಟಿತ್ತು ಎಂದು ಪುನರುಚ್ಚರಿಸಿದ್ದಾರೆ. ಜೊತೆಗೆ ಪೆಹಲ್ಗಾಮ್ ಉಗ್ರ ಕೃತ್ಯದ ರೂವಾರಿ ಹಾಗೂ ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸೀಂ ಮುನೀರ್‌ಗೆ ಔತಣಕೂಟ ಏರ್ಪಡಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

# ತಾಂತ್ರಿಕ ದೋಷದಿಂದ ದೆಹಲಿಗೆ ವಾಪಸ್ಸಾದ ಇಂಡಿಗೋ ವಿಮಾನ

**ನವದೆಹಲಿ, ಜೂ.19–** ಲೇಪ್‌ಗೆ ತೆರಳುತ್ತಿದ್ದ ಇಂಡಿಗೋ ವಿಮಾನವು ಎರಡು ಗಂಟೆಗಳಿಗೂ ಹೆಚ್ಚು ಕಾಲ ಹಾರಾಟ ನಡೆಸಿದ ನಂತರಇಂದು ಬೆಳಿಗ್ಗೆ ತಾಂತ್ರಿಕ ಸಮಸ್ಯೆಯಿಂದಾಗಿ ರಾಷ್ಟ್ರ ರಾಜಧಾನಿಗೆ ವಾಪಸ್ಸಾಗಿದೆ.

ಪ್ಲೈಟ್ ಟ್ರ್ಯಾಕಿಂಗ್ ವೆಬ್‌ಸೈಟ್ 24. ನಲ್ಲಿ ಲಭ್ಯವಿರುವ ಮಾಹಿತಿಯ ಪ್ರಕಾರ, ದೆಹಲಿಯಿಂದ ಲೇಪ್‌ಗೆ 6 ಇ2006 ವಿಮಾನವನ್ನು ಹಾರಾಟ ನಡೆಸಿದ 320 ವಿಮಾನವು ಎರಡು ಗಂಟೆಗಳಿಗೂ ಹೆಚ್ಚು ಕಾಲ ಹಾರಾಟ ನಡೆಸಿದ ನಂತರ ರಾಷ್ಟ್ರ ರಾಜಧಾನಿಗೆ ಮರಳಿತು.ಜೂನ್ 19, 2025 ರಂದು ದೆಹಲಿಯಿಂದ ಲೇಪ್‌ಗೆ ಹಾರಾಟ ನಡೆಸುತ್ತಿದ್ದ ಇಂಡಿಗೋ ವಿಮಾನ 6ಇ2006, ತಾಂತ್ರಿಕ ಸಮಸ್ಯೆಯಿಂದಾಗಿ ಲೇಜ್‌ನಲ್ಲಿ ಇಳಿಯಲು ನಿರ್ಬಂಧಗಳನ್ನು ಉಂಟು ಮಾಡಿತು.

ಕಾರ್ಯವಿಧಾನಗಳ ಪ್ರಕಾರ, ಪೈಲಟ್ ದೆಹಲಿಗೆ ಮರಳಿದರು ಎಂದು ವಿಮಾನಯಾನ ವಕ್ತಾರರು ಹೇಳಿಕೆಯಲ್ಲಿ ತಿಳಿಸಿದ್ದಾರೆ.ವಿಮಾನವು ಕಾರ್ಯಾಚರಣೆಯನ್ನು ಪುನರಾರಂಭಿಸುವ ಮೊದಲು ಅಗತ್ಯ ನಿರ್ವಹಣೆಗೆ ಒಳಗಾಗುತ್ತಿದೆ ಎಂದು ವಕ್ತಾರರು ತಿಳಿಸಿದ್ದಾರೆ. ಈ ಮಧ್ಯೆ, ಗ್ರಾಹಕರನ್ನು ಲೇಜ್‌ಗೆ ಹಾರಿಸಲು ಪರ್ಯಾಯ




ವಿಮಾನವನ್ನು ವ್ಯವಸ್ಥೆ ಮಾಡಲಾಗಿದೆ ಎಂದು ವಕ್ತಾರರು ಹೇಳಿದರು ಮತ್ತು ಪ್ರಯಾಣಿಕರಿಗೆ ಉಂಟಾದ ಅನಾನುಕೂಲತೆಗೆ ವಿಷಾದ ವ್ಯಕ್ತ ಪಡಿಸಿದರು. ವಿಮಾನದಲ್ಲಿದ್ದ ಪ್ರಯಾಣಿಕರ ಸಂಖ್ಯೆಯ ಬಗ್ಗೆ ವಿವರಗಳನ್ನು ತಕ್ಷಣವೇ ಕಂಡುಹಿಡಿಯಲು ಸಾಧ್ಯವಾಗಲಿಲ್ಲ.

# ಶಾಸಕನ ಡ್ರಾಮಾ ಜನರಿಗೆ ಗೊತ್ತಾಗಿದೆ : ಪ್ರದೀಪ್ ಈಶ್ವರ್ ವಿರುದ್ಧ ಸುಧಾಕರ್ ವ್ಯಂಗ್ಯ

**ಚಿಕ್ಕಬಳ್ಳಾಪುರ, ಜೂ.19–** ಕ್ಷೇತ್ರ ಸ್ಥಳೀಯ ಶಾಸಕನ ಡ್ರಾಮಾ ಏನೆಂಬುದು ಕ್ಷೇತ್ರದ ಜನತೆಗೆ ಈಗಾಗಲೇ ಗೊತ್ತಾಗಿದೆ. ಅವರ ಜೊತೆಗಿರುವ ಕಾರ್ಯಕರ್ತರಿಗೂ ಹೈಡ್ರಾಮಾ ಅರ್ಥವಾಗಿದೆ ಎಂದು ಮಾರ್ಮಿಕವಾಗಿ ಪ್ರದೀಪ್ ಈಶ್ವರ್ ವಿರುದ್ಧ ಸಂಸದ ಡಾ. ಕೆ ಸುಧಾಕರ್ ವ್ಯಂಗ್ಯವಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು. ಇದುವರೆಗೂ ಕ್ಷೇತ್ರದಲ್ಲಿ ಒಬ್ಬರಿಗೆ ಒಂದು ಮನೆ ಕೊಟ್ಟಿಲ್ಲ, ರಸ್ತೆಗಳನ್ನು ನಿರ್ಮಾಣ ಮಾಡಿಲ್ಲ ಇವರು ಹೋಗುವ ರಸ್ತೆಗಳೆಲ್ಲ ಗುಂಡಿ ಬಿದ್ದು ಹಾಳಾಗಿವೆ. ಈವರೆವಿಗೂ ಇವರು ಏನು ಕಡೆದು ಕಟ್ಟೆ ಹಾಕಿದ್ದಾರೋ ಸಿಡಿಮಿಡಿಗೊಂಡರು. ಹೋದಬಂದ ಕಡೆಗಳಲ್ಲೆಲ್ಲಾ ಹಾರತುರಾಯಿಗಳನ್ನು ಹಾಕಿಸಿಕೊಳ್ಳುವುದು ಹಾಸಿದ ಚಾಪೆ ಮೇಲೆ ಕುಳಿತುಕೊಳ್ಳುವುದು ಇದೇನಾ ಅವರ ಅಭಿವೃದ್ಧಿ ಎಂದು ಜನರೇ ಮಾತನಾಡಿಕೊಳ್ಳುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ನನ್ನ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕೆಲಸಗಳು ಬಿಟ್ಟರೆ ಈ ಕ್ಷೇತ್ರದಲ್ಲಿ ಈವರೆಗೂ ಒಂದು ಅಭಿವೃದ್ಧಿಯಾಗಿಲ್ಲ. ಬಯಲುಸೀಮೆ ಜಿಲ್ಲೆಗಳನ್ನು ರಾಜ್ಯ ಸರ್ಕಾರ ಭೂಪಟದಿಂದಲೇ ತೆಗೆದು ಹಾಕಿದಂತಿದೆ. ಕಾಂಗ್ರೆಸ್ ಸರ್ಕಾರ ಬಯಲು ಸೀಮೆಯ ಜಿಲ್ಲೆಗಳನ್ನು ಕಡೆಗಣಿಸಿದೆ. ಯಾವುದೇ ಅಭಿವೃದ್ಧಿ ಕಾರ್ಯ ಮಾಡದೆ ನಿರ್ಲಕ್ಷ ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಎರಡೂವರೆ ವರ್ಷಗಳಲ್ಲಿ ಚಿಕ್ಕಬಳ್ಳಾಪುರ ಕೋಲಾರ ಜಿಲ್ಲೆಗಳನ್ನು ಕಡೆಗಣಿಸಲಾಗಿದೆ ಎಚ್.ಎನ್ ವ್ಯಾಲಿ 210 ಎಂಎಲ್‌ಡಿಗೆ ಮೂರನೇ ಹಂತದ ಶುದ್ಧೀಕರಣ ಮಾಡಲು ಆಗಿನ ಮುಖ್ಯಮಂತ್ರಿ ಬಸವರಾಜು ಬೊಮ್ಮಾಯಿ ಘೋಷಿಸಿದ್ದರು. ಆದರೆ ಇನ್ನೂ ಅದು ಜಾರಿಯಾಗಿಲ್ಲ ನೂರಹತ್ತರ ಬದಲು 148 ಎಂಎಲ್‌ಡಿ ನೀರು ಮಾತ್ರ ಬರುವಂತಾಗಿದೆ .ಇನ್ನು ಎಸ್ ಟಿಪಿ ನೀರಿನಿಂದ ಬೆಳೆದ ತರಕಾರಿಯನ್ನೇ ಬೆಂಗಳೂರಿನ ಜನರು ಬಳಸುತ್ತಿದ್ದಾರೆ. ಸುಮಾರು ಎರಡು ಕೋಟಿ ಜನರು ಈ ನೀರನ್ನ ಬಳಸುತ್ತಿದ್ದಾರೆ ಆದ್ದರಿಂದ ಈ ನೀರಿನ ಮೂರನೇ ಹಂತದ ಶುದ್ಧೀಕರಣ ಮಾಡಲೇಬೇಕಿದೆ ಎಂದು ಒತ್ತಾಯಿಸಿದರು.

ಕೃಷ್ಣ ಕಾವೇರಿ ತುಂಗಭದ್ರಾದಿಂದ ನೀರು ಸಿಗುವುದಿಲ್ಲ ಎತ್ತಿನಹೊಳೆಯಿಂದ ನೀರು ಬರಲಿದೆ ಎಂದು 12 ವರ್ಷದ ಹಿಂದೆಯೇ




ಸಿಎಂ ಸಿದ್ದರಾಮಯ್ಯ ಹೇಳಿದರು ಹಿಂದಿನ ಬಿಜೆಪಿ ಸರ್ಕಾರ 2 ರಿಂದ 4 ಸಾವಿರ ಕೋಟಿ ರೂ.ಗೂ ಅಧಿಕ ಅನುದಾನ ನೀಡಿ ಕಾಮಗಾರಿ ಮಾಡಿಸಿತ್ತು ಕಾಂಗ್ರೆಸ್ ಸರ್ಕಾರ ಬಂದ ನಂತರ ಸರಿಯಾದ ಅನುದಾನ ಭೂ ಪರಿಹಾರ ನೀಡಿಲ್ಲ ಎತ್ತಿನ ಹೊಳೆ ನೀರು ಇನ್ನೂ ಸಕಲೇಶಪುರದ ಬಳಿಯೇ ಇದೆ ಬಯಲುಸೀಮೆ ಪ್ರದೇಶಗಳ ಈ ಭಾಗದತ್ತ ಹರಿಯಲೇ ಇಲ್ಲ ಎಂದರು.

ಮೆಡಿಕಲ್ ಕಾಲೇಜನ್ನು ಬಿಜೆಪಿ ಅವದಿಯಲ್ಲಿ ನಿರ್ಮಿಸಲಾಗಿದೆ 810 ಕೊಟ್ಟರು ಖರ್ಚು ಮಾಡಿದ್ದರು. ಆಸ್ಪತ್ರೆ ಆರಂಭ ಆಗಿಲ್ಲ ಕ್ಷೇತ್ರದಲ್ಲಿ ಮಾದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನ ನಾನು ನಿರ್ಮಿಸಿದ್ದೇನೆ ಆದರೆ ಇನ್ನೂ ವೈದ್ಯಕೀಯ ಉಪಕರಣಗಳನ್ನು ಪೂರೈಕೆ ಮಾಡಿಲ್ಲ. ಉನ್ನತ ಶಿಕ್ಷಣ ಸಚಿವರು ನಮ್ಮ ಜಿಲ್ಲೆಗೆ ವಿಶ್ವವಿದ್ಯಾಲಯ ತರುತ್ತಾರೆ ಎಂಬ ಆಶಾಭಾವನೆ ಇತ್ತು ಆದರೆ ರಾಜ್ಯದ ಒಂಬತ್ತು ವಿವಿಗಳನ್ನ ಮುಚ್ಚಿ ಹಾಕಿದ್ದಾರೆ ಬಿಜೆಪಿ ಕಾಲದ ಬಜೆಟ್ ನಲ್ಲಿ ಹೈಟೆಕ್ ಹೂವಿನ ಮಾರುಕಟ್ಟೆ ನಿರ್ಮಾಣವನ್ನ ಘೋಷಿಸಲಾಗಿತ್ತು ಇದ್ಯಾವುದೂ ಆಗಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

# ಸೋನಿಯಾ ಗಾಂಧಿ ಆರೋಗ್ಯ ಸ್ಥಿರ

**ನವದೆಹಲಿ, ಜೂ. 19–** ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಅವರು ಹೊಟ್ಟೆ ನೋವಿನಿಂದ ಆಸ್ಪತ್ರೆಗೆ ದಾಖಲಾಗಿದ್ದಾರೆ. ಅವರ ಆರೋಗ್ಯ ಸ್ಥಿರವಾಗಿದ್ದು, ಚೇತರಿಸಿಕೊಳ್ಳುತ್ತಿದ್ದಾರೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

78 ವರ್ಷದ ಕಾಂಗ್ರೆಸ್ ನಾಯಕಿಯನ್ನು ಜೂನ್ 15 ರಂದು ಸರ್ ಗಂಗಾ ರಾಮ್ ಆಸ್ಪತ್ರೆಗೆ ದಾಖಲಿಸಲಾಗಿತ್ತು.ಆಸ್ಪತ್ರೆಯ ಅಧ್ಯಕ್ಷ ಡಾ.ಅಜಯ್ ಸ್ವರೂಪ್ ಅವರ ಪ್ರಕಾರ, ಗಾಂಧಿ ಚಿಕಿತ್ಸೆ ಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಿದ್ದಾರೆ.

ಅವರ ಆರೋಗ್ಯ ಸ್ಥಿರವಾಗಿದೆ ಮತ್ತು ಅವರ ನಿರಂತರ ಆರೈಕೆಯ ಭಾಗವಾಗಿ ಇಂದು ನಿರ್ದಿಷ್ಟ ಆಹಾರ ಯೋಜನೆಯನ್ನು ಪರಿಚಯಿಸಲಾಗಿದೆ. ಅವರು ನಿಕಟ ನಿಗಾದಲ್ಲಿದ್ದಾರೆ ಎಂದು ಅವರು



ಇಂದು ಬೆಳಿಗ್ಗೆ ಬಿಡುಗಡೆ ಮಾಡಿದ ಆರೋಗ್ಯ ಮಾಹಿತಿಯಲ್ಲಿ ತಿಳಿಸಿದ್ದಾರೆ. ಅವರ ಚೇತರಿಕೆ ಸ್ಥಿರವಾಗಿ ಪ್ರಗತಿಯಲ್ಲಿದ್ದರೂ, ಆಸ್ಪತ್ರೆ ಇನ್ನೂ ಡಿಸ್ಚಾರ್ಜ್ ದಿನಾಂಕವನ್ನು ನಿರ್ಧರಿಸಿಲ್ಲ. ಅವರ ಒಟ್ಟಾರೆ ಚೇತರಿಕೆಯ ಆಧಾರದ ಮೇಲೆ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ವೈದ್ಯರು ತಿಳಿಸಿದ್ದಾರೆ.ಹಿರಿಯ ವೈದ್ಯರ ತಂಡವು ಅವರ ಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಹೇಳಿಕೆ ತಿಳಿಸಿದೆ.

# ಜಾತಿ ಗಣತಿಗೆ ಗ್ರಾಪಂ ಅಧಿಕಾರಿ–ಸಿಬ್ಬಂಗಳನ್ನು ಬಳಸಿಕೊಳ್ಳಿ: ದಿನೇಶ್ ಗೂಳಿಗೌಡ



**ಬೆಂಗಳೂರು, ಜೂ.19–** ತ್ವರಿತವಾಗಿ ಮತ್ತು ಕರಾರುವಕ್ಕಾಗಿ ಜಾತಿ ಗಣತಿ ನಡೆಯಲು ಅನುಕೂಲವಾಗುವಂತೆ ಎಲ್ಲಾ ಗ್ರಾಪಂ ಅಧಿಕಾರಿ ಸಿಬ್ಬಂಗಳನ್ನು ಬಳಸಿಕೊಳ್ಳಬೇಕೆಂದು ವಿಧಾನ ಪರಿಷತ್ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಗ್ರಾಮೀಣ ಅಭಿವೃದ್ಧಿ ಪ್ರಿಯಾಂಕ ಖರ್ಗೆ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿರುವ ಅವರು ಕರ್ನಾಟಕದ ಜನತೆಯ ಸಾಮಾಜಿಕ–ಶೈಕ್ಷಣಿಕ ಸ್ಥಾನಮಾನಗಳ ಕುರಿತು ಮರು ಸಮೀಕ್ಷೆ ಮಾಡುವ ರಾಜ್ಯ ಸರ್ಕಾರದ ಕ್ರಮ ಸ್ವಾಗತಾರ್ಹವಾಗಿದೆ.

ಕರ್ನಾಟಕದಲ್ಲಿ ನಡೆಸಲು ಉದ್ದೇಶಿಸಿರುವ ಸಾಮಾಜಿಕ–ಶೈಕ್ಷಣಿಕ ಗಣತಿಯ ನಿಖರತೆ ಹಾಗೂ ತ್ವರಿತ ಪ್ರಕ್ರಿಯೆಗಾಗಿ ರಾಜ್ಯದ 5950 ಗ್ರಾಮ ಪಂಚಾಯ್ತಿಗಳ 92.000 ಸದಸ್ಯರನ್ನು ಜನರಿಗೆ ಅರಿವು ಮೂಡಿಸಲು ಬಳಸಿಕೊಳ್ಳುವುದು ಮತ್ತು ಗ್ರಾಪಂನ ಬಿಲ್ ಕಲೆಕ್ಟರ್, ಡಾಟಾ ಎಂಟ್ರಿ ಆಪರೇಟರ್‌ಗಳು, ಕಾರ್ಯದರ್ಶಿಗಳು ಹಾಗೂ ಪಿಡಿಒಗಳನ್ನು ಸಮೀಕ್ಷೆಯಲ್ಲಿ ತೊಡಗಿಸಿಕೊಂಡರೇ ತ್ವರಿತವಾಗಿ ಮುಗಿಸಬಹುದೆಂದು ಹೇಳಿದ್ದಾರೆ.

ರಾಜ್ಯದ ಜಾತಿ–ಸಮುದಾಯಗಳ ನಿಜವಾದ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ತಿಳಿಯುವುದು ಈ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆಯ ಮುಖ್ಯ ಉದ್ದೇಶವಾಗಿದೆ. ಇದರಿಂದ ಮೀಸಲಾತಿ ನೀತಿಗಳನ್ನು ವೈಜ್ಞಾನಿಕವಾಗಿ ಪರಿಷ್ಕರಿಸಲು ಹಾಗೂ ಕಲ್ಯಾಣ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ತಲುಪಿಸಲು ಸಹಾಯವಾಗುತ್ತದೆ. ಇದು ಸಂವಿಧಾನದ ಆಶಯದಂತೆ ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಒದಗಿಸಲು ಅನುಕೂಲವಾಗುತ್ತದೆ.

ಈಗ ನಿಗದಿತ ಕಾಲಮಾನದಲ್ಲಿ ಈ ಸಮೀಕ್ಷೆಯನ್ನು ಪೂರ್ಣಗೊಳಿಸಲು, ರಾಜ್ಯದಲ್ಲಿರುವ 5950 ಗ್ರಾಮ ಪಂಚಾಯಿತಿಗಳ 92.000 ಸದಸ್ಯರನ್ನು ಸಮೀಕ್ಷೆಯ ಕುರಿತು ಜನರಿಗೆ ಅರಿವು ಮೂಡಿಸಲು ಮತ್ತು ಸಹಕಾರ ಒದಗಿಸಲು ಬಳಸಿಕೊಳ್ಳುವುದು ಸೂಕ್ತವಾಗಿದೆ. ಅವರ ಸ್ಥಳೀಯ ಪರಿಚಯ ಮತ್ತು ಪ್ರಭಾವದಿಂದ ಜನರಲ್ಲಿ ಸಮೀಕ್ಷೆಯ ಬಗ್ಗೆ ವಿಶ್ವಾಸ ಹೆಚ್ಚುತ್ತದೆ.

ಈ ಸಿಬ್ಬಂದಿಯು ತಮ್ಮ ಕರ್ತವ್ಯದ ಭಾಗವಾಗಿ ತಮ್ಮ ವ್ಯಾಪ್ತಿಯ ಸುಮಾರು 200ರಿಂದ 500 ಕುಟುಂಬಗಳ ಮನೆಗಳಿಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸಬಹುದಾಗಿದೆ. ಅಲ್ಲದೆ, ಇವರ ಜತೆ ಆಯಾ ವಾರ್ಡ್ ಸದಸ್ಯರೂ ಭೇಟಿ ನೀಡುವಂತೆ ಮಾಡಿದಲ್ಲಿ ಸಮೀಕ್ಷೆಯು ಹೆಚ್ಚು ಪಾರದರ್ಶಕತೆ ಮತ್ತು ನಿಖರ–ವಸ್ತುನಿಷ್ಠ ದತ್ತಾಂಶವನ್ನು ಪಡೆಯಲು ಸಾಧ್ಯವಾಗುತ್ತದೆ.

ಸಮೀಕ್ಷೆ ಯಾವ ರೀತಿ ಇರಬೇಕು, ಯಾವೆಲ್ಲ ಮಾಹಿತಿಗಳನ್ನು ಸಂಗ್ರಹಿಸಬೇಕು ಮತ್ತು ಹೇಗೆ ಮಾಡಬೇಕು ಎಂಬಿತ್ಯಾದಿ ಮಾಹಿತಿಗಳನ್ನು ಈ ಗ್ರಾಪಂ ಸಿಬ್ಬಂದಿಗೆ ಸೂಕ್ತ ತರಬೇತಿಯ ಮೂಲಕ ಸ್ಪಷ್ಟಪಡಿಸಬೇಕು. ಈ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಮತ್ತು ಸಮರ್ಪಕವಾಗಿ ಜಾರಿಗೆ ತರುವ ಹೊಣೆಯನ್ನು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಸಿಇಒಗಳಿಗೆ ವಹಿಸಬೇಕು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

# ಕೇಂದ್ರದ ವಿರುದ್ಧ ಪ್ರಿಯಾಂಕ್ ವಾಗ್ದಾಳಿ

**ಬೆಂಗಳೂರು,ಜೂ.19–** ಬೋಸ್ಟನ್, ಸ್ಯಾನ್‌ಫ್ರಾನ್ಸಿಸ್ಕೋ ನಗರಗಳಲ್ಲಿ ಆಯೋಜನೆಗೊಂಡಿದ್ದ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಲು ವಿದೇಶಕ್ಕೆ ತೆರಳಿದ್ದ ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಮೆರಿಕಗೆ ಕ್ಲಿಯರೆನ್ಸ್ ಸಿಗದ ಹಿನ್ನೆಲೆ ಇಂದು ಬೆಂಗಳೂರಿಗೆ ವಾಪಸ್ ಆಗಿದ್ದಾರೆ. ಬರ್ತಿದ್ದಂತೆ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ಪ್ರಿಯಾಂಕ್ ಖರ್ಗೆ ಮಾಧ್ಯಮಗಳೊಂದಿಗೆ ಮಾತನಾಡಿ, ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದ ಯಶಸ್ಸನ್ನ ಕಟ್ಟಿಹಾಕುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಅಮೆರಿಕ ಭೇಟಿಗೆ ಕೇಂದ್ರದಿಂದ ಕ್ಲಿಯರೆನ್ಸ್ ಸಿಗದ ಕುರಿತು ಮಾತನಾಡಿ, ತಿರಸ್ಕಾರ ಮಾಡಲಿ, ಆದ್ರೆ ಅದಕ್ಕೆ ಕಾರಣ ಕೊಡಬೇಕು. ಮೇಕ್ ಇನ್ ಇಂಡಿಯಾ ಅಂತಾ ದೊಡ್ಡ ದೊಡ್ಡ ಮಾತುಗಳು ಹೇಳ್ತಾರೆ. ಯಾವುದೇ ಘೋಷಣೆ ಕೊಟ್ಟರೂ ಅದು ಪ್ರಾರಂಭವಾಗಬೇಕಿರೋದು ಕರ್ನಾಟಕದಿಂದ್ಲೇ. ನಮ್ಮಲ್ಲಿ ಅಷ್ಟೊಂದು ಮಾನವ ಸಂಪನ್ಮೂಲ ಹಾಗೂ ಅರ್ಹತೆ ಇದೆ. ಡೆಲಿಗೇಷನ್‌ಗೆ ಮೊದಲು ತಿರಸ್ಕಾರ ಮಾಡಿದ್ರು ನಂತರ, ಡೆಲಿಗೇಷನ್‌ಗೆ ಅನುಮತಿ ಕೊಟ್ರು ಅದ್ರೆ ನಮಗೆ ತಿರಸ್ಕಾರ ಮಾಡಿದ್ರು ಎಂದು ಅಸಮಾಧಾನ ಹೊರಹಾಕಿದ್ದಾರೆ.

**ಕರ್ನಾಟಕ ದೇಶದ ಆರ್ಥಿಕತೆಯ ಎಂಜಿನ್:** ನಾವು ಆಟ ಆಡೋದಕ್ಕೆ ಅಲ್ಲಿಗೆ ಹೋಗ್ತಿಲ್ಲ, ಜನರಿಗೆ ಉದ್ಯೋಗ ಸೃಷ್ಟಿ ಮಾಡೋದು ನಮ್ಮ ಕರ್ತವ್ಯ. ಬಂಡವಾಳ ತರೋದು ಕೂಡ ನಮ್ಮ ಕರ್ತವ್ಯವಾಗಿದೆ. ಕರ್ನಾಟಕಕ್ಕೆ ಒಳ್ಳೆದಾದ್ರೆ ನಮ್ಮ ರಾಷ್ಟ್ರಕ್ಕೆ ತಾನೆ ಒಳ್ಳೆದು, ಕರ್ನಾಟಕ ದೇಶದ ಆರ್ಥಿಕತೆಯ ಎಂಜಿನ್. ವಿನಾಃ ಕಾರಣ ಸಾರಸಾಗಟಾಗಿ ತಿರಸ್ಕಾರ ಮಾಡೋದು ಸರಿಯಲ್ಲ. ಹೋದ ಬಾರಿ ನಾವು ಎಂ.ಬಿ



ಪಾಟೀಲ್ ಅವರು ಅಮೆರಿಕಗೆ ಹೋಗಿದ್ವಿ. ಆಗ 35 ರಿಂದ 40 ಸಾವಿರ ಕೋಟಿ ಲೆಟರ್ ಆಫ್ ಇಂಟೆಂಟ್ ಹಾಗೂ ಎಂಓಯೂ ಗಳಾಗಿದ್ವು.

ಅದನ್ನ ಇನ್ವೆಸ್ಟ್ ಕರ್ನಾಟಕದಲ್ಲಿ ಸಾಲಿಡಿಫೈ ಮಾಡಿದ್ವಿ. ಮೊನ್ನೆ ಸೆಮಿಕಂಡಕ್ಟರ್ ಮತ್ತೆ ಎಲೆಕ್ಟ್ರಾನಿಕ್ಸ್ ಮ್ಯಾನಿಫ್ಯಾಕ್ಚರ್‌ಗೆ ಸುಮಾರು 20 ಸಾವಿರ ಕೋಟಿ ರೂ ಅನುಮೋದನೆ ಕೊಟ್ಟಿದ್ದೀವಿ. ಇದರ ಪ್ರತಿಫಲವಾಗಿ ಕರ್ನಾಟಕ ಎಲೆಕ್ಟ್ರಾನಿಕ್ಸ್ ಹಬ್ ಹಾಗೂ ಏರೋಸ್ಪೇಸ್ ಹಬ್ ಆಗಿದೆ. ನವೋದ್ಯಮದಲ್ಲಿ ಅಗ್ರಸ್ಥಾನ ಪಡೆದು ಕೊಳ್ಳಲು ಕರ್ನಾಟಕಕ್ಕೆ ಸಾಧ್ಯವಾಗುತ್ತಿದೆ ಎಂದು ರಾಜ್ಯ ಸರ್ಕಾರದ ಕಾರ್ಯಕ್ಷಮತೆಯನ್ನು ವಿವರಿಸಿದ್ದಾರೆ.

# ಕ್ರೊಯೇಷಿಯಾದಲ್ಲಿ ಮೋದಿಗೆ ಅದ್ದೂರಿ ಸ್ವಾಗತ

**ನವದೆಹಲಿ,ಜೂ.19–**ಕೆನಡಾದಿಂದ ಕ್ರೊಯೇಷಿಯಾಕ್ಕೆ ಭೇಟಿ ನೀಡಿರುವ ಪ್ರಧಾನಮಂತ್ರಿ ಮೋದಿ ಅವರನ್ನು ಅದ್ದೂರಿ ಸ್ವಾಗತ ನೀಡಿ ಬರಮಾಡಿಕೊಂಡಿದೆ. ಭಾರತೀಯ ಪ್ರಧಾನಿಯೊಬ್ಬರು ಇದೇ ಮೊದಲ ಬಾರಿಗೆ ಕ್ರೊಯೇಷಿಯಾಕ್ಕೆ ಭೇಟಿ ನೀಡಿದ್ದಾರೆ.



ಈ ಹಿನ್ನೆಲೆಯಲ್ಲಿ ಆ ದೇಶದ ಪ್ರಧಾನಿ ಆಂಡ್ರೆಜ್ ಪೆಂಕ್ಲೊವಿಕ್ ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ಸಂಸ್ಕೃತ ಶ್ಲೋಕಗಳನ್ನು ಘೋಷಿಸಿ ರತ್ನಗಂಬಳಿ ಸ್ವಾಗತ ನೀಡಲಾಯಿತು.

ಮೋದಿ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ವೀಡಿಯೊದಲ್ಲಿ ಮೂವರು ಕ್ರೊಯೇಷಿಯಾದ ಮಹಿಳೆಯರು ಮತ್ತು ಮೂವರು ಪುರುಷರು ಭಾರತೀಯ ಉಡುಪುಗಳನ್ನು ಧರಿಸಿರುವುದು ಕಾಣಬಹುದಾಗಿದೆ.

ಮಹಿಳೆಯರು ಬಿಳಿಯ ಸೀರೆಯನ್ನುಟ್ಟುಕೊಂಡಿದ್ದರೆ, ಪುರುಷರು ಬಿಳಿ ಕುರ್ತಾಗಳನ್ನು ಧರಿಸಿ ಹಣೆಯ ಮೇಲೆ ವಿಭೂತಿ ಹಚ್ಚಿಕೊಂಡು ಶ್ಲೋಕಗಳನ್ನು ಹೇಳುತ್ತಿದ್ದಾರೆ. ಸಾಂಪ್ರಾದಾಯಿಕ ಭಾರತೀಯ ಶೈಲಿಯಲ್ಲಿ ಮೋದಿ ಅವರಿಗೆ ಕೈ ಮುಗಿದು ನಮಸ್ಕರಿಸಿ ವೇದ–ಮಂತ್ರಗಳನ್ನು ಪಠಿಸುತ್ತಿರುವುದು ಕಂಡು ಬಂದಿದೆ. ಕ್ರೊಯೇಷಿಯಾ ಜತೆ ಮೋದಿ ಅವರು ದ್ವಿಪಕ್ಷೀಯ ವ್ಯಾಪಾರ ಸಂಬಂದ ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ.

# ನಂದಿನಿ ಮಳಿಗೆಗೆ ಮೊದಲ ಆದ್ಯತೆ ನೀಡಬೇಕು

**ಬೆಂಗಳೂರು, ಜೂ.19–**ನಮ್ಮ ಮೆಟ್ರೋದಲ್ಲಿ ನಂದಿನಿ ಮಳಿಗೆಗೆ ಮೊದಲ ಆದ್ಯತೆ ಕೊಡಬೇಕು ಎಂದು ಸಚಿವ ರಾಮಲಿಂಗಾ ರೆಡ್ಡಿ ಮನವಿ ಮಾಡಿದ್ದಾರೆ.

ನಮ್ಮ ಮೆಟ್ರೋದಲ್ಲಿ ನಂದಿನಿ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿ ನಮ್ಮ ನಂದಿನಿ ಉತ್ಪನ್ನ ರಾಷ್ಟ್ರ, ಹೆಸರು ಮಾಡಿದೆ. ಉತ್ತಮ ಗುಣ ಅಮುಲ್‌ಗೆ ಅವಕಾಶ ಕೊಟಿ ಮೊದಲು ನಂದಿನಿಗೆ ಕೊಡಬೇ



ಮಳಿಗೆಗೆ ಅವಕಾಶ ನೀಡದ ಕ್ರಿಯೆ ನೀಡಿದ ಅವರು, ಅಂತರಾಷ್ಟ್ರೀಯ ಮಟ್ಟದಲ್ಲಿ ಮಟ್ಟದ ಪದಾರ್ಥಗಳು ಇವೆ. ದ್ದಾರೆ. ಇದು ಸರಿ ಯ ಲ್ಲ. ಕಿತ್ತು ಎಂದು ತಿಳಿಸಿದರು.

ರೈಲ್ವೆ, ಮೆಟ್ರೋ, ಎಲ್ಲೇ ಆದರೂ ಕೊಡಬೇಕು. ನಾವು ಕೆಎಸ್ ನಂದಿನಿಗೆ ಆದ್ಯತೆ ಕೊಟ್ಟಿದ್ದೇವೆ. ಕೊಟ್ಟಿದ್ದಾರೆ ಅಂತ ಅವರಿಗೆ ಪ್ರಥಮ ಆದ್ಯತೆ ನಂದಿನಿಗೆ ಆರ್‌ಟಿಸಿ ಸೇರಿ ಎಲ್ಲಾ ಕಡೆ ಅಮುಲ್ ಹೆಚ್ಚು ಹಣ ಕೊಡಬೇಡಿ. ನಂದಿನಿಗೆ ಮೊದಲ ಆದ್ಯತೆ ಕೊಡಬೇಕು. ಸಿಎಂ, ಡಿಸಿಎಂ ಗಮನಕ್ಕೂ ಇದು ಬಂದಿದೆ ಎಂದು ತಿಳಿಸಿದರು.

ಮಾವು ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆ ಬೆಂಬಲ ಬೆಲೆ ಕೊಡುವ ಬಗ್ಗೆ ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಿ, ನಿರ್ಧಾರ ತೆಗೆದುಕೊಳ್ಳುವುದಾಗಿ ಹೇಳಿದರು.

ಮಾವು ಬೆಳೆಗಾರರು ಸಂಕಷ್ಟದಲ್ಲಿದ್ದಾರೆ. ಪ್ರಾರಂಭದಲ್ಲಿ ಮಾವು ಮೇಳ ಮಾಡಿದಾಗ ನಾನು ಹೋಗಿದ್ದೆ. ಆಗ ಬೆಲೆ ಜಾಸ್ತಿಯಿತ್ತು. ಈಗ ದಿಢೀರ್ ಅಂತ ಕಡಿಮೆ ಆಗಿದೆ. ಈ ಬಾರಿ ಬೆಳೆ ಜಾಸ್ತಿಯಾಗಿ, ಫಸಲು ಜಾಸ್ತಿ ಬಂದಿದೆ ಎಂದರು.

ಯುವ ಮಾರ್ಗ

ಶುಕ್ರವಾರ : 20–06–2025

## ಜೂನ್ 21ರಂದು ರಾಯಚೂರು ಅಂಚೆ ಕಚೇರಿಗಳಲ್ಲಿ ವಹಿವಾಟು ಸ್ಥಗಿತ

**ರಾಯಚೂರು,ಜೂ.19–**ನಗರದ ಪ್ರಧಾನ ಅಂಚೆ ಕಚೇರಿಯಿಂದ ಐಟಿ 2.0 ಅಡಿಯಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸುತ್ತಿರುವ ಹಿನ್ನೆಲೆಯಲ್ಲಿ ರಾಯಚೂರು ಪ್ರಧಾನ ಅಂಚೆ ಕಚೇರಿ ಮತ್ತು ಅದರ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪ ಅಂಚೆ ಕಚೇರಿಗಳಲ್ಲಿ ಜೂನ್ 21 ರಂದು ಯಾವುದೇ ರೀತಿಯ ವಹಿವಾಟು ಇರುವುದಿಲ್ಲವೆಂದು ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಹೆಚ್ ಅವರು ತಿಳಿಸಿದ್ದಾರೆ.

ಈ ಕುರಿತು ರಾಯಚೂರು ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು ಪ್ರಧಾನ ಅಂಚೆ ಕಚೇರಿ, ಮುಕ್ರಮ್ ಗಂಜ್, ಜವಾಹರನಗರ, ನಯಾ ಬಜಾರ್, ರಾಯಚೂರು ಸಾತ್ ಕಚೇರಿ, ರಾಯಚೂರು ಆರ್ ಎಸ್., ರಾಯಚೂರು ಯುಎಎಸ್, ಮಾನವಿ, ಸಿಂಧನೂರು, ಲಿಂಗಸಗೂರು, ಸಿರವಾರ, ಮಸ್ಕಿ, ದೇವದುರ್ಗ, ಜಾಲಹಳ್ಳಿ ಗಬ್ಬೂರ್, ಕಲ್ಮಲಾ, ಕಲ್ಲೂರು, ಕುರ್ಡಿ, ಮಟಮಾರಿ, ಯರಗೇರಾ, ಶಕ್ತಿನಗರ, ಯರಮರಸ್, ಯರಮರಸ್ ಕ್ಯಾಂಪ್, ದಡೇಸುಗೂರು, ತುರ್ವಿಹಳ, ಜವಳಗೆರಾ, ಹಟ್ಟಿ, ಕವಿತಾಳ, ರೊಡಲಬಂಡ, ಗುರುಗುಂಟಾ, ಲಿಂಗಸುಗೂರು ಕಚೇರಿ, ಸಿಂಧನೂರು ಕೋರ್ಟ್ ಕಚೇರಿ, ಗಬ್ಬೂರು, ಗುಂಜಹಳ್ಳಿ ಸೇರಿ 36 ಅಂಚೆ ಕಚೇರಿಗಳು ಹಾಗೂ ಅವುಗಳ ವ್ಯಾಪ್ತಿಯಲ್ಲಿ ಬರುವ ಶಾಖ ಅಂಚೆ ಕಚೇರಿಗಳಲ್ಲಿ ಜೂನ್ 21 ರಂದು ಯಾವುದೇ ವ್ಯವಹಾರ ವಹಿವಾಟು ಇರುವುದಿಲ್ಲ, ಆದ್ದರಿಂದ ಅಂಚೆ ಕಚೇರಿಯ ಗ್ರಾಹಕರು ಸಹಕರಿಸಬೇಕಾಗಿ, ಸಾರ್ವಜನಿಕರಲ್ಲಿ ವಿನಂತಿ ಮಾಡಿಕೊಳ್ಳಲಾಗಿದೆ ಎಂದು ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 28, 29ಕ್ಕೆ ಜಿಲ್ಲಾಮಟ್ಟದ ಟೇಬಲ್ ಟೆನ್ನಿಸ್ ಪಂದ್ಯಾವಳಿ

**ರಾಯಚೂರು,ಜೂ.19–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಟೇಬಲ್ ಟೆನ್ನಿಸ್ ಸಂಸ್ಥೆ ರಾಯಚೂರು ಹಾಗೂ ರೋಟರಿ ಕ್ಲಬ್ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಟೇಬಲ್ ಟೆನ್ನಿಸ್ ಕ್ರೀಡೆಯನ್ನು ಉತ್ತೇಜಿಸುವ ಸಲುವಾಗಿ ರಾಯಚೂರು ಜಿಲ್ಲೆಯ ಕ್ರೀಡಾಪಟುಗಳಿಗೆ ಮಾತ್ರ ಜೂನ್ 28 ಮತ್ತು ಜೂನ್ 29ರ ಬೆಳಿಗ್ಗೆ 8.30ಕ್ಕೆ ಜಿಲ್ಲಾ ಮಟ್ಟದ ಟೇಬಲ್ ಟೆನ್ನಿಸ್ ಕ್ರೀಡಾ ಪಂದ್ಯಾವಳಿಗಳನ್ನು ನಗರದ ಒಳಾಂಗಣ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಜೂನ್ 28ರಂದು 14 ವರ್ಷದೊಳಗಿನವರಿಗೆ ಟೇಬಲ್ ಟೆನ್ನಿಸ್ ಪಂದ್ಯ ವೈಯಕ್ತಿಕ ಬಾಲಕ ಮತ್ತು ಬಾಲಕಿಯರಿಗಾಗಿ ಪ್ರತ್ಯೇಕವಾಗಿ ನಡೆಯಲಿದೆ. ಜೂನ್ 19ರಂದು ನಡೆಯುವ ಸ್ಪರ್ಧೆಗೆ ವಯಸ್ಸಿನ ನಿರ್ಭಂಧವಿರುವುದಿಲ್ಲ. ಅಂದು ಟೇಬಲ್ ಟೆನ್ನಿಸ್, ವೈಯಕ್ತಿಕ ಮತ್ತು ಡಬಲ್ಸ್ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳು ನಡೆಯಲಿವೆ.

ಪಂದ್ಯಾವಳಿಗಳಲ್ಲಿ ಭಾಗವಹಿಸುವುದು ಉಚಿತವಾಗಿದೆ. ಯಾವುದೇ ಪ್ರವೇಶ ಶುಲ್ಕ ಇರುವುದಿಲ್ಲ. ವಿಜೇತರಿಗೆ ಪ್ರಮಾಣ ಪತ್ರ, ಫದಕ ಮತ್ತು ಟ್ರಾಫಿ ನೀಡಲಾಗುವುದು. ಜಿಲ್ಲೆಯ ಟೇಬಲ್ ಟೆನ್ನಿಸ್ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಅಥವಾ ಶ್ರೀ ವಿ ಲಕ್ಷ್ಮಿನಾರಾಯಣ ಮೋ ಸಂಖ್ಯೆ : 9845861363, ಶ್ರೀ ವೀರಣ್ಣ ಮೋ ಸಂ.9448837766 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಈರೇಶ್ ನಾಯಕ ಅವರು ತಿಳಿಸಿದ್ದಾರೆ.

## ಅಮೆರಿಕ ಕನ್ನಡ ಒಕ್ಕೂಟಗಳಿಂದ ಕಮಲ್ ಹಾಸನ್ ಚಿತ್ರಗಳಿಗೆ ಬಹಿಷ್ಕಾರ



**ಬೆಂಗಳೂರು,ಜೂ.19–** ಕನ್ನಡ ಭಾಷೆಗೆ ಎರಡು ಸಾವಿರ ವರ್ಷಕ್ಕೂ ಹೆಚ್ಚು ಇತಿಹಾಸವಿದ್ದು, ವಿಶ್ವದಾದ್ಯಂತ ಒಂದು ಶಾಸ್ತ್ರಿ?ಯ ಭಾಷೆ ಎಂಬುದು ಮನೆ ಮಾತಾಗಿದೆ. ಸಾಹಿತ್ಯ, ಸಂಗೀತ, ಕಲೆ, ಇತ್ಯಾದಿ ಕ್ಷೇತ್ರಗಳಲ್ಲಿ ಕನ್ನಡ ನೀಡಿರುವ ಕೊಡುಗೆ ವಿಶ್ವ ಮಾನ್ಯವಾಗಿದ್ದರೂ ನಟ ಕಮಲ್ ಹಾಸನ್ ಹೇಳಿಕೆ ಖಂಡನೀಯ ಎಂದು ಅಮೆರಿಕ ಕನ್ನಡ ಒಕ್ಕೂಟ ಹೇಳಿದೆ.

ಇತ್ತಿ?ಚಿನ ಅಮೆರಿಕದ ವಿವಿಧ ಕನ್ನಡ ಕೂಟಗಳು ಸಭೆ ನಡೆಸಿ ಕರ್ನಾಟಕದ ವಿದ್ಯಮಾನಗಳಿಗೆ ಪ್ರತಿಕ್ರಿಯಿಸಿ ಕನ್ನಡ ಮತ್ತು ತಮಿಳು ಸಹೋದರ ಭಾಷೆಗಳು. ಯಾವುದೇ ಕಾರಣಕ್ಕೂ ತಮಿಳು ಭಾಷೆ ಪುರಾತನವಾದ ಕನ್ನಡದ ತಾಯಿಯಾಗಲು ಸಾಧ್ಯವೇ ಇಲ್ಲ. ಈ ರೀತಿಯ ಬಾಲಿಶ ಹೇಳಿಕೆ ನೀಡಿರುವ ಕಲಾವಿದ

ಕಮಲ್ ಹಾಸನ್ ಅವರ ಉದ್ಧಟತನವನ್ನು ಕಟುವಾಗಿ ಅಮೇರಿಕಾ ಕನ್ನಡ ಸಂಸ್ಥೆ (ಅಕ್ಕ) ಖಂಡಿಸುತ್ತದೆ ಎಂದು ಅಕ್ಕ ಅಧ್ಯಕ್ಷರಾಗಿರುವ ಮಧು ರಂಗಯ್ಯ ಅವರು ತಿಳಿಸಿದ್ದಾರೆ. ಅಲ್ಲದೆ ಕಮಲ್ ಹಾಸನ್ ನಟಿಸಿರುವ ಚಿತ್ರಗಳ ಕನ್ನಡ ಅವತರಣಿಕೆಯನ್ನು ಬಹಿಷ್ಕರಿಸಲಾಗುವುದು ಎಂದು ತಿಳಿಸಿದ್ದಾರೆ.

# "ಪ್ಲಾಸ್ಟಿಕ್ ಮಾಲಿನ್ಯವನ್ನು ಸೋಲಿಸಿ" ಧ್ಯೇಯವಾಕ್ಯದಡಿ ಪರಿಸರ ದಿನಾಚರಣೆ

**ಯುವ ಮಾರ್ಗ ಸುದ್ದಿ**

**ಮಾನ್ವಿ:** ಪಟ್ಟಣದ ಲೊಯೋಲ ಶಿಕ್ಷಣ ಸಂಸ್ಥೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು "ಪ್ಲಾಸ್ಟಿಕ್ ಮಾಲಿನ್ಯವನ್ನು ಸೋಲಿಸಿ" ಎಂಬ ಧ್ಯೇಯ ವಾಕ್ಯದೊಂದಿಗೆ ವಿಜೃಂಭಣೆಯಿಂದ ಆಚರಿಸಲಾಯಿತು. ಲೊಯೋಲ ಶಿಕ್ಷಣ ಸಂಸ್ಥೆಗಳು, ಲೊಯೋಲ ಸಮಾಜ ಸೇವಾ ಕೇಂದ್ರ, ಮಾನ್ವಿ ಹಾಗೂ ವಲಯ ಅರಣ್ಯ ಇಲಾಖೆ, ಮಾನ್ವಿ ಇವರ ಸಂಯುಕ್ತಾಶ್ರಯದಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಹಿರಿಯ ಗುರುಗಳಾದ ವಂ.ಫಾ.ಮ್ಯಾಕ್ಸಿರಸ್ಕೀನ್ಹಾ ಎಸ್.ಜೆ. ಮಾತನಾಡಿ, "ಒಬ್ಬ ತಾಯಿಯು ತನ್ನ ಕೂಸನ್ನು ಪ್ರೀತಿಸಿ ಬೆಳೆಸುವಂತೆ ತಾಯಿ ಸೃಷ್ಟಿಯು ನಮ್ಮನ್ನು ಪೋಷಿಸುತ್ತಾ ಬಂದಿದೆ. ಆದರೆ, ಇಂದು ನಾವು ಈ ಪರಿಸರವನ್ನು ಹಿಂಸಿಸಿ ಕೊಲ್ಲುತ್ತಿದ್ದೇವೆ. ಒಂದು ಕಡೆ ಮರಗಳನ್ನು ಕಡಿಯುತ್ತಿದ್ದೇವೆ, ಇನ್ನೊಂದು ಕಡೆ ದೊಡ್ಡ ದೊಡ್ಡ ರಾಸಾಯನಿಕ ಕಾರ್ಖಾನೆಗಳಿಂದ ವಿಷಕಾರಿ ಪದಾರ್ಥಗಳನ್ನು ಹರಿಸುತ್ತಾ ಪ್ರಾಣಿಗಳನ್ನು, ಗಿಡಮರಗಳನ್ನು ಸಾಯಿಸುತ್ತಿದ್ದೇವೆ" ಎಂದು ಕಳವಳ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಕೆಂಚಪ್ಪ ಹಂಚಿನಾಳ, ಗಸ್ತು ಅರಣ್ಯಾಧಿಕಾರಿಗಳು, ಮಾನ್ವಿ, "ನಮ್ಮ ಸುತ್ತಮುತ್ತಲು ಕಾಣುವ ಗಿಡಮರ, ಪ್ರಾಣಿ ಪಕ್ಷಿಗಳೇ ಪರಿಸರ. ಇಂದಿನ ದಿನಮಾನಗಳಲ್ಲಿ ಮಾನವನ ಅತಿಯಾದ ದುರಾಸೆಯಿಂದಾಗಿ ಪರಿಸರ ನಾಶ ನಡೆಯುತ್ತಿದೆ. ಇದರ ಬದಲಾಗಿ, ನಮಗೆ ನಮ್ಮ ಪೂರ್ವಜರು ನೀಡಿದ ಈ ಕೊಡುಗೆಯನ್ನು ನಮ್ಮ ಮುಂದಿನ ಪೀಳಿಗೆಗೆ ನೀಡುವುದು ನಮ್ಮೆಲ್ಲರ ಕರ್ತವ್ಯ" ಎಂದರು. ಅಲ್ಲದೆ, "ನಾವು ಅತಿಯಾಗಿ ಬಳಸುವ ವಾಹನಗಳು ಮತ್ತು ಏ.ಸಿ.ಗಳಿಂದ ಭೂಮಿಯ ಮೇಲ್ಭಾಗದಲ್ಲಿರುವ ಓಝೋನ್ ಪದರವು ಹರಿದು ಮನುಷ್ಯನ ಮೇಲೆ ದುಷ್ಪರಿಣಾಮಗಳು ಉಂಟಾಗುವ ಮೊದಲು ನಾವೆಲ್ಲರೂ ಎಚ್ಚೆತ್ತುಕೊಂಡು ನಮ್ಮ ಪರಿಸರ ಉಳಿಸಿ, ಪೋಷಿಸುವ ಕಾರ್ಯಕ್ಕೆ ಮುಂದಾಗೋಣ" ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ, ಸಂಸ್ಥೆಯ ಅಡಿಯಲ್ಲಿ ಹಳ್ಳಿಗಳಲ್ಲಿ ಕಾರ್ಯನಿರ್ವಹಿಸುವ ಸಮುದಾಯ ನಾಯಕರಿಗೆ, ಶಾಲಾ ಶಿಕ್ಷಣದಲ್ಲಿ ಸಮುದಾಯದ ಭಾಗವಹಿಸುವಿಕೆಯಲ್ಲಿ ಎಸ್.ಡಿ.ಎಮ್.ಸಿ.ಗಳ ಪಾತ್ರ ಕುರಿತು ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಸಿ.ಪಿ.ಓದಿಸೋಮಠ ಅವರು ನಾಯಕರ ಪಾತ್ರ ಹಾಗೂ ಜವಾಬ್ದಾರಿಗಳ ಕುರಿತು ವಿವರವಾಗಿ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಲೊಯೋಲ ಸಮಾಜ ಸೇವಾ ಕೇಂದ್ರದ ಸಹಾಯಕ ನಿರ್ದೇಶಕರಾದ ಫಾ.ಜಾರ್ಜ ಎಸ್.ಜೆ., ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಓದಿಸೋಮಠ, ಲೊಯೋಲ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಫಾ.ಪ್ರವೀಣ್ ಕುಮಾರ ಎಸ್.ಜೆ., ಜನಶಕ್ತಿ ಒಕ್ಕೂಟದ ಅಧ್ಯಕ್ಷರಾದ ಗಂಗಮ್ಮ, ಸಮುದಾಯ ನಾಯಕರಾದ ಎನ್.ಬಸವರಾಜ, ಯುವಕರ ಸಂಘದ ಅಧ್ಯಕ್ಷರಾದ ಏಲಿಯಾಸ್ ಹಾಗೂ ವಿವಿಧ ಹಳ್ಳಿಗಳಿಂದ ಆಗಮಿಸಿದ ಸ್ವ–ಸಹಾಯ ಸಂಘದ ಪ್ರತಿನಿಧಿಗಳು, ಅಸಂಘಟಿತ ವಲಯದ ಯುವಕರು ಮತ್ತು ಲೊಯೋಲ ಸಂಸ್ಥೆಯ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಹುಲ್ ಗಾಂಧಿ ಹುಟ್ಟು ಹಬ್ಬ : ವಿದ್ಯಾರ್ಥಿಗಳಿಗೆ ಪೆನ್ನು, ಬುಕ್ ವಿತರಣೆ

**ಯುವ ಮಾರ್ಗ ಸುದ್ದಿ**

**ಲಿಂಗಸಗೂರು,ಜೂ.19–** ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ವರಿಷ್ಟ ರಾಹುಲ್ ಗಾಂಧಿ ಅವರ ಹುಟ್ಟು ಹಬ್ಬವನ್ನು ವಿದ್ಯಾರ್ಥಿಗಳಿಗೆ ಪೆನ್ನು, ಪುಸ್ತಕ ವಿತರಣೆ ಮಾಡುವುದರ ಮೂಲಕ ಅರ್ಥಪೂರ್ಣವಾಗಿ

ಲಿಂಗಸಗೂರು ಯುವ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಸಂತೋಷ ಸೊಪ್ಪಿಮಠರವರ ನೇತೃತ್ವದಲ್ಲಿ ಆಚರಿಸಲಾಯಿತು.

ಪಟ್ಟಣದ ಶಾಸಕರ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಪೆನ್ನು ಮತ್ತು ನೋಟ್



ಪುಸ್ತಕ ವಿತರಿಸುವುದರ ಮೂಲಕ ಹಾಗೂ ಪಟ್ಟಣದ ಗಡಿಯಾರ್ ಚೌಕ್ ನಲ್ಲಿ ಸಿಹಿ ಹಂಚುವುದರ ಮೂಲಕ ರಾಹುಲ್ ಗಾಂಧಿ ಅವರ ಹುಟ್ಟು ಹಬ್ಬವನ್ನು ಆಚರಿಸಲಾಯಿತು.

ಈ ಸಂಧರ್ಭದಲ್ಲಿ ಮುದ್ಗಲ್ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷಅಬ್ದುಲ್ ಕದೀರ್ ಸಾಬ್ , ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹುಸೇನ್ ಪಾಷಾ, ಮಾಜಿ ಯುವ ಕಾಂಗ್ರೆಸ್ ಅಧ್ಯಕ್ಷರು ವಸೀಂ ಪಾಷಾ , ರಾಘವೇಂದ್ರ ತುಪ್ಪದ್ ,ನಾಗರಾಜ ಕನ್ನಾಳ ,ಮಂಜು ಮನಗೂಳಿ, ಬಸವರಾಜ್ ಸಾಹುಕಾರ್ , ಸೋಹೆಲ್ , ಪ್ರವೀಣ್ ಕುಮಾರ್, ಅಶೋಕ್ ಕಡಕಲ್ ,ಮೌಲ ಜಂಗ್ಲಿ,ಸೇರಿದಂತೆ ಅನೇಕರು ಇದ್ದರು.

# ಅಂತಾರಾಷ್ಟ್ರೀಯ ಯೋಗ ದಿನ : ರಾಯಚೂರಿನಲ್ಲಿ ಜಾಗೃತಿ ಜಾಥಾ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.19–** ಜಿಲ್ಲಾಡಲಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆಯುಷ್ ಇಲಾಖೆ, ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಹಾಗೂ ಯೋಗ ಸಂಘ ಸಂಸ್ಥಗಳ ಅಶ್ರಯದಲ್ಲಿ ಜೂನ್ 19ರಂದು ನಡೆದ ಯೋಗ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಚಾಲನೆ ನೀಡಿದರು.

ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಿಂದ ಆರಂಭವಾದ ಜಾಥಾ ನಗರದ ಪ್ರಮುಖ ರಸ್ತೆಯಲ್ಲಿ ಸಾಗಿ ಸರ್ಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆ ಎಕ್ ಮೀನಾರ್ ರೋಡ್‌ವರೆಗೆ ಸಂಚರಿಸಿತು. ಜಾಥಾದಲ್ಲಿ ಭಾಗಿಯಾಗಿದ್ದ ಶಾಲಾ ಮಕ್ಕಳು ನಾನಾ ಸಂದೇಶದ ಫಲಕಗಳನ್ನು ಪ್ರದರ್ಶಿಸಿ ಜಾಥಾದಲ್ಲಿ ಸಾಗಿ ಗಮನ ಸೆಳೆದರು.

ಜಾಥಾದಲ್ಲಿ ಆರೋಗ್ಯ ಅಧಿಕಾರಿ ಶಂಕರಗೌಡ್ರು, ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರಗೌಡ, ಕ್ಷೇತ್ರ ಶಿಕ್ಷಣ ಅಧಿಕಾರಿ ಕೆ.ಕೊಟ್ರಬಸಪ್ಪ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ಈರೇಶ್ ನಾಯಕ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಸಂಚಾಲಕರಾದ ಡಾ.ದಂಡಪ್ಪ ಬಿರಾದಾರ್, ಯೋಗ ತರಬೇತಿದಾರ ಡಾ.ತಿಮಪ್ಪ ವಡ್ಡೆಪಳ್ಳಿ ಆಯುಷ್ ಇಲಾಖೆಯ ಡಾ.ನವೀನ್, ಡಾ.ಪ್ರತಿಭಾ ಪಾಟೀಲ್, ಡಾ.ರಾಜೇಂದ್ರ, ಡಾ.ದುರುಗಪ್ಪ, ಡಾ.ಕನಕಲಕ್ಷ್ಮಿ, ಡಾ.ಅರುಣಾ, ಡಾ.ನಾಜಿಯಾ, ಡಾ.ಶಾಧೀಯಾ, ಆಯುಷ್ ಇಲಾಖೆಯ ಸಿಬ್ಬಂದಿ ವರ್ಗದವರು, ಭಾರತ ಸೇವಾದಳದ ವಿದ್ಯಾಸಾಗರ್, ದೈಹಿಕ ಶಿಕ್ಷಣ ನಿರ್ದೇಶಕರಾದ ಪರಶುರಾಮ್, ದೈಹಿಕ ಶಿಕ್ಷಣ ಶಿಕ್ಷಕರಾದ ರಂಗನಾಥ್, ಶಿಕ್ಷಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಿಬ್ಬಂದಿ ಭಾಗಿಯಾಗಿದ್ದರು.

## ತೋಟಗಾರಿಕೆ ಇಲಾಖೆಯಿಂದ ಅರ್ಜಿ ಆಹ್ವಾನ

**ರಾಯಚೂರು,ಜೂ.19–** 2025–26ನೇ ಸಾಲಿನ ತೋಟಗಾರಿಕೆ ಇಲಾಖೆ (ಜಿ.ಪಂ) ದೇವದುರ್ಗ ತಾಲ್ಲೂಕ ವತಿಯಿಂದ ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ನವೀನಕುಮಾರ ತಿಳಿಸಿದ್ದಾರೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಘಟಕಗಳಾದ ಹೊಸ ಪ್ರದೇಶ ವಿಸ್ತರಣೆಯಲ್ಲಿ ಬಾಳೆ, ದಾಳಿಂಬೆ, ಹೂವು ಮತ್ತು ಹೈಬ್ರಿಡ್ ತರಕಾರಿ ಹಾಗೂ ವೈಯಕ್ತಿಕ ಕೃಷಿಹೊಂಡ, ನೀರು ಸಂಗ್ರಹಣ ಘಟಕ (4500,6000.ಘ.ಮೀ ಸಾಮರ್ಥ್ಯ) ಪ್ಲಾಸ್ಟಿಕ್ ಹೊದಿಕೆ, ವೀಡ್ ಮ್ಯಾಟ್. ಯಾಂತ್ರೀಕರಣ ಮಿನಿ ಟ್ರ್ಯಾಕ್ಟರ್– 20 ಹೆಚ್.ಪಿ, ಪ್ಯಾಕಹೌಸ್, ಶೀಥಲ ಗೃಹ, ಸಮಗ್ರ ಕೀಟ / ಪೋಷಕಾಂಶ ನಿರ್ವಾಹಣೆ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಪದ್ಧತಿ ಅಳವಡಿಸಲು ಹಾಗೂ ತಾಳೆ ಬೆಳೆ ಪ್ರದೇಶ ವಿಸ್ತರಣೆಗೆ ಸಹಾಯಧನ ಪಡೆಯಲು ಅರ್ಜಿ ಸಲ್ಲಿಸಬಹುದು.

ರೈತರು ಸಂಬಂಧಪಟ್ಟ ಹೋಬಳಿ ಅಧಿಕಾರಿಗಳು ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ದೇವದುರ್ಗ ಕಚೇರಿಗೆ ಭೇಟಿ ನೀಡಿ ಜೂನ್ 30ರೊಳಗೆ ಅಗತ್ಯ ದಾಖಲೆಗಳಾದ ಪಹಣಿ, ಭಾವಚಿತ್ರ, ಆಧಾರ್ ಕಾರ್ಡ್, ಬ್ಯಾಂಕ್ ಪಾಸಬುಕ್ ಜೆರಾಕ್ಸ್, ಜಾತಿ ಪ್ರಮಾಣ ಪತ್ರ, ಗಣಕೀಕೃತ ಬೆಳೆ ಧೃಢೀಕರಣ, ಚೆಕ್‌ಬಂದಿ ಇತ್ಯಾದಿಗಳನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಅಧಿಕಾರಿ ದೇವದುರ್ಗಾ –9686246128, ಅರಕೇರಾ–9535121367, ಗಬ್ಬೂರು –9901251996, ಜಾಲಹಳ್ಳಿ –7996717257, ರೈತ ಸಂಪರ್ಕ ಕೇಂದ್ರಗಳಿಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪ್ರದೇಶದಲ್ಲಿ ಇಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜೂ.19** ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ಮತ್ತು ಜವಹಾರನಗರ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 20ರ ಬೆಳಗ್ಗೆ 10 ಗಂಟೆಯಿಂದ ಸಂಜೆ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ರಾಯಚೂರು,ಜೂ.19–** 2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯದಿಂದ, ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಗಾಗಿ (1ರಿಂದ 8ನೇ ತರಗತಿ) ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ ವಿದ್ಯಾರ್ಥಿಗಳಿಗೆ ರಾಜ್ಯ ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಆಸಕ್ತಿಯುಳ್ಳ ಅರ್ಹ ವಿದ್ಯಾರ್ಥಿಗಳು ಜೂನ್ 30 ರೊಳಗಾಗಿ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ http://ssp.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬುಹುದು. ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರ ರಾಯಚೂರು–9731028420, ದೇವದುರ್ಗ–9148233616, ಲಿಂಗಸುಗೂರು–9886447863, ಮಾನವಿ–887334758 ಹಾಗೂ ಸಿಂಧನೂರು–8217621732, ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಳೆಯ ಪಿಂಚಣಿ ಯೋಜನೆ ಜಾರಿಗೆ ಯತ್ನ

**ಬೀದರ್,ಜೂ.19–**ರಾಜ್ಯ ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ಯೋಜನೆ ಜಾರಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಹೇಳಿದರು.

ನಗರದ ನೌಬಾನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ನಡೆದ ಸಂಘದ ಜಿಲ್ಲಾ ಘಟಕದ ನಾಮ ನಿರ್ದೇಶಿತ ಉಪಾಧ್ಯಕ್ಷ ಶ್ರೀಕಾಂತ ಪಾಟೀಲ ಅವರ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಳೆಯ ಪಿಂಚಣಿ ಯೋಜನೆ ಜಾರಿಗೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರ ಸಮಿತಿ ರಚಿಸಿದೆ. ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಶೀಘ್ರ ಜಾರಿಗೆ ಒತ್ತಡ ತರಲಾಗುವುದು ಎಂದು ತಿಳಿಸಿದರು.ರಾಜ್ಯ ಸರ್ಕಾರಿ ನೌಕರರ ವಿವಿಧ ಬೇಡಿಕೆಗಳ ಈಡೇರಿಕೆಗೆ ಸಂಘ ನಿರಂತರ ಪ್ರಯತ್ನಿಸುತ್ತಿದೆ. ನೌಕರರ ಹಿತ ರಕ್ಷಣೆಗೆ ಬದ್ಧವಾಗಿದೆ ಎಂದು ಹೇಳಿದರು. ಪ್ರಾಚಾರ್ಯೆ ಜಯಶ್ರೀ ಪ್ರಭಾ, ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು, ಕಾಲೇಜು ಬೋಧಕ ಹಾಗೂ ಬೋಧಕ ಸಿಬ್ಬಂದಿ ಹಾಜರಿದ್ದರು.ಹಳೆಯ ಪಿಂಚಣಿ ಯೋಜನೆ ಜಾರಿಗೆ ಯತ್ನ

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**